ಜನಮನದ ದನಿ

ಪ್ರಜೋದಯ

ಸಂಪಾದಕ : ಜೆ.ಆರ್. ಕೆಂಚೇಗೌಡ



ಮಂಡಿರಜ್ಜು ಗಾಯಕ್ಕೆ ಒಳಗಾಗಿರುವ ವಿರಾಟ್ ಕೊಹ್ಲಿ ಅವರು ಜೂನ್ 13ರಿಂದ ಅಫ್ಗಾನಿಸ್ತಾನ ವಿರುದ್ಧ ಆರಂಭವಾಗಲಿರುವ ಏಕದಿನ ಸರಣಿಯಿಂದ ಹೊರಗುಳಿಯಲಿದ್ದಾರೆ.

05 ಜೂನ್, 2026 ಶುಕ್ರವಾರ ಬೆಲೆ ₹ 2.00 ಸಂಪುಟ : 20 ಸಂಚಿಕೆ : 86 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629



ಇಂದು ವಿಶ್ವ ಪರಿಸರ ದಿನಾಚರಣೆ » 2

ಸೌರಶಕ್ತಿ ಉತ್ಪಾದನೆ : 2ನೇ ಸ್ಥಾನಕ್ಕೆ ಜಿಗಿದ ಭಾರತ » 3

ಆರೋಗ್ಯ ಸೇವೆ ಲೋಪವಾಗದಮತೆ ಕರ್ತವ್ಯ ನಿರ್ವಹಿಸಿ » 4

ನೂತನ ಸಚಿವರಿಗೆ ಖಾತೆ ಹಂಚಿಕೆ

ಸಿಎಂಗೆ ಹಣಕಾಸು, ಗುಪ್ತಚರ, ಸಹಕಾರ, ಆಡಳಿತ ಸುಧಾರಣೆ ಜವಾಬ್ದಾರಿ | ಡಾ.ಜಿ.ಪರಮೇಶ್ವರ್‌ಗೆ ಕಂದಾಯ, ಯುವ ಸಬಲೀಕರಣ

• ಪ್ರಜೋದಯ ವರದಿ

ಬೆಂಗಳೂರು: ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ತಮ್ಮೊಂದಿಗೆ ಸಚಿವರಾಗಿ ಪ್ರಮಾಣವಚನ ಸ್ವೀಕರಿಸಿದ್ದ 13 ಸಚಿವರಿಗೆ ಗುರುವಾರ ಖಾತೆ ಹಂಚಿಕೆ ಮಾಡಿದ್ದಾರೆ.

ಇದರೊಂದಿಗೆ ಹಣಕಾಸು, ಗೃಹ, ಕಂದಾಯ, ಜಲಸಂಪನ್ಮೂಲ, ಬೆಂಗಳೂರು ನಗರಾಭಿವೃದ್ಧಿ ಖಾತೆ ಸೇರಿ ಇತರೆ ಪ್ರಮುಖ ಖಾತೆಗಳು ಯಾರಿಗೆ ಸಿಗಲಿದೆ ಎಂಬ ಕುತೂಹಲಕ್ಕೆ ಕೊನೆಗೂ ತೆರೆ ಬಿದ್ದಿದೆ. ಪ್ರಮುಖ ಖಾತೆಗಳಿಗಾಗಿ ಪಟ್ಟು ಹಿಡಿದಿದ್ದ ಹಿರಿಯ ಸಚಿವರು ಸಿದ್ದರಾಮಯ್ಯ ನೇತೃತ್ವದ ಸಂಪುಟದಲ್ಲಿ ಕಾರ್ಯ ನಿರ್ವಹಿಸಿದ ಖಾತೆಗಳನ್ನೇ ನೀಡಿ, ಅಲ್ಲಿ ಇನ್ನೂ ಕೆಲ ಅತೀ ಮುಖ್ಯ ಕಾರ್ಯ ಯೋಜನೆಗಳು ಬಾಕಿ ಉಳಿದಿದ್ದು, ಅವುಗಳನ್ನು ಪೂರ್ಣಗೊಳಿಸಬೇಕೆಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಮೇಲೆ ಒತ್ತಡ ಹೇರಿದ್ದರು. ಹೀಗಾಗಿ ಹಲವು ಸಚಿವರಿಗೆ ಈ ಹಿಂದೆ ನೀಡಿದ್ದ ಖಾತೆಗಳನ್ನು ನೀಡಲಾಗಿದೆ.

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಹಣಕಾಸು, ಗುಪ್ತಚರ, ಸಹಕಾರ, ಸಿಬ್ಬಂದಿ ಆಡಳಿತ ಸುಧಾರಣೆ ಖಾತೆಯನ್ನು ತಮ್ಮ ಬಳಿಯೇ ಉಳಿಸಿಕೊಂಡಿದ್ದಾರೆ. ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಅವರಿಗೆ ಕಂದಾಯ ಮತ್ತು ಯುವ ಸಬಲೀಕರಣ ಇಲಾಖೆಯ ಜವಾಬ್ದಾರಿ ಕೊಡಲಾಗಿದೆ.

ಬೆಂಗಳೂರು ನಗರಾಭಿವೃದ್ಧಿ ಖಾತೆ ಬಯಸಿದ್ದ ರಾಮಲಿಂಗಾ ರೆಡ್ಡಿ ಅವರಿಗೆ ಜಲಸಂಪನ್ಮೂಲ ಖಾತೆಯ ಜವಾಬ್ದಾರಿ ನೀಡಲಾಗಿದೆ. ಈ ಹಿಂದೆ ಕಂದಾಯ ಇಲಾಖೆ ಜವಾಬ್ದಾರಿ ಹೊತ್ತಿದ್ದ ಕೃಷ್ಣ ಬೈರೇಗೌಡ ಅವರಿಗೆ ಬೆಂಗಳೂರು ನಗರಾಭಿವೃದ್ಧಿ ಖಾತೆ ಯನ್ನು ವಹಿಸಲಾಗಿದೆ.

ಸಚಿವ ಸತೀಶ್ ಜಾರಕಿಹೊಳಿ ಅವರಿಗೆ ಲೋಕೋಪಯೋಗಿ ಇಲಾಖೆಯ ಜವಾಬ್ದಾರಿಯನ್ನು ನೀಡಲಾಗಿದೆ. ಸಂಪುಟದ ಪ್ರಮುಖ ಸಚಿವ ಕೆ.ಜೆ.ಜಾರ್ಜ್ ಅವರಿಗೆ ಇಂಧನ ಇಲಾಖೆ ಜೊತೆಗೆ ಪ್ರವಾಸೋದ್ಯಮ ಖಾತೆ ನೀಡಲಾಗಿದೆ. ಹಾಗೆಯೇ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಆಪ್ತ ಭೈರತಿ ಸುರೇಶ್ ಅವರಿಗೆ ಸಾರಿಗೆ

ಇಲಾಖೆ ನೀಡಲಾಗಿದೆ.

ಪ್ರಿಯಾಂಕ್ ಖರ್ಗೆ ಅವರಿಗೆ ಗೃಹ ಮತ್ತು ಐಟಿ-ಬಿಟಿ, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪುತ್ರ ಡಾ.ಯತೀಂದ್ರ ಸಿದ್ದರಾಮಯ್ಯ ಅವರಿಗೆ ನಗರಾಭಿವೃದ್ಧಿ ಮತ್ತು ಹಿಂದುಳಿದ ಕಲ್ಯಾಣ, ಯು.ಟಿ. ಖಾದರ್‌ಗೆ ಆರೋಗ್ಯ, ಎಂ.ಬಿ. ಪಾಟೀಲ್‌ಗೆ ಬೃಹತ್ ಕೈಗಾರಿಕೆ, ಕೆ.ಹೆಚ್.ಮುನಿಯಪ್ಪ ಅವರಿಗೆ ಈ ಹಿಂದೆ ನಿರ್ವಹಿಸಿದ್ದ ಆಹಾರ ಖಾತೆಯನ್ನೇ ನೀಡಲಾಗಿದೆ.

ಈ ಹಿಂದೆ ಅರಣ್ಯ ಇಲಾಖೆ ಜವಾಬ್ದಾರಿ ನಿರ್ವಹಿಸಿದ್ದ ಈಶ್ವರ್ ಖಂಡ್ರೆ ಅವರಿಗೆ ಈ ಬಾರಿ ಪಂಚಾಯತ್ ರಾಜ್ ಮತ್ತು ಗ್ರಾಮೀಣಾಭಿವೃದ್ಧಿ ಹೊಣೆ ನೀಡಲಾಗಿದೆ. ಡಾ.ಶರಣ ಪ್ರಕಾಶ್ ಪಾಟೀಲ್ ಅವರಿಗೆ ವೈದ್ಯಕೀಯ ಶಿಕ್ಷಣ ಇಲಾಖೆಯ ಜವಾಬ್ದಾರಿ ವಹಿಸಲಾಗಿದೆ.

ಖಾತೆಗಳ ವಿವರ

- ಕೃಷ್ಣ ಬೈರೇಗೌಡ – ಬೆಂಗಳೂರು ಅಭಿವೃದ್ಧಿ
- ಪ್ರಿಯಾಂಕ್ ಖರ್ಗೆ – ಗೃಹ, ಐಟಿ-ಬಿಟಿ
- ಡಾ.ಯತೀಂದ್ರ – ನಗರಾಭಿವೃದ್ಧಿ, ಹಿಂದುಳಿದ ಕಲ್ಯಾಣ
- ಯು.ಟಿ.ಖಾದರ್-ಆರೋಗ್ಯ
- ಸತೀಶ್ ಜಾರಕಿಹೊಳಿ – ಲೋಕೋಪಯೋಗಿ
- ಎಂ.ಬಿ.ಪಾಟೀಲ್ – ಬೃಹತ್ ಕೈಗಾರಿಕೆ
- ಕೆ.ಜೆ.ಜಾರ್ಜ್ – ಇಂಧನ, ಪ್ರವಾಸೋದ್ಯಮ
- ಕೆ.ಹೆಚ್.ಮುನಿಯಪ್ಪ – ಆಹಾರ
- ರಾಮಲಿಂಗಾ ರೆಡ್ಡಿ – ಜಲಸಂಪನ್ಮೂಲ
- ಈಶ್ವರ್ ಖಂಡ್ರೆ – ಪಂಚಾಯತ್ ರಾಜ್ ಮತ್ತು ಗ್ರಾಮೀಣಾಭಿವೃದ್ಧಿ
- ಬೈರತಿ ಸುರೇಶ್ – ಸಾರಿಗೆ
- ಡಾ.ಶರಣ ಪ್ರಕಾಶ್ ಪಾಟೀಲ್ – ವೈದ್ಯಕೀಯ ಶಿಕ್ಷಣ

ರಾಮಲಿಂಗಾರೆಡ್ಡಿ ಅಸಮಾಧಾನ

ಖಾತೆ ಹಂಚಿಕೆ ವಿಚಾರದಲ್ಲಿ ಅಸಮಾಧಾನ ಸ್ಫೋಟಗೊಂಡಿದ್ದು ಬೆಂಗಳೂರು ನಗರಾಭಿವೃದ್ಧಿ ಖಾತೆ ನೀಡದಿದ್ದಕ್ಕೆ ಹಿರಿಯ ಸಚಿವ ರಾಮಲಿಂಗಾರೆಡ್ಡಿ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಲು ನಿರ್ಧರಿಸಿದ್ದಾರೆ ಎನ್ನಲಾಗಿದೆ. ರಾಮಲಿಂಗಾರೆಡ್ಡಿ ಅವರು ಬೆಂಗಳೂರು ನಗರಾಭಿವೃದ್ಧಿ ಖಾತೆ ಮೇಲೆ ಕಣ್ಣಿಟ್ಟಿದ್ದರು. ಆದರೆ, ಅವರಿಗೆ ಬೆಂಗಳೂರು ನಗರಾಭಿವೃದ್ಧಿ ಖಾತೆ ಕೊಡದೆ ಜಲಸಂಪನ್ಮೂಲ ಖಾತೆ ಹಂಚಿಕೆ ಮಾಡಲಾಗಿದೆ. ಇದು ಅಸಮಾಧಾನಕ್ಕೆ ಕಾರಣವಾಗಿದೆ.

ಗುರುವಾರ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಭೇಟಿ ಮಾಡಿ, ಕೊಟ್ಟರೆ ಬೆಂಗಳೂರು ನಗರಾಭಿವೃದ್ಧಿ ಖಾತೆ ಕೊಡಿ, ಇಲ್ಲದಿದ್ದರೇ ಸಚಿವ ಸ್ಥಾನವೇ ಬೇಡ ಎಂದು ಪಟ್ಟು ಹಿಡಿದಿದ್ದಾರೆ ಎನ್ನಲಾಗಿದೆ. ಅಲ್ಲದೆ ಸಚಿವ ಸ್ಥಾನಕ್ಕೆ ರಾಜೀನಾಮೆ ಸಹ ಸಲ್ಲಿಸಿದ್ದಾರೆ ಎನ್ನಲಾಗಿದೆ.

ಆಡಳಿತ ಯಂತ್ರಕ್ಕೆ ಚುರುಕು ಮುಟ್ಟಿಸಿದ ಮುಖ್ಯಮಂತ್ರಿ

• ಪ್ರಜೋದಯ ವರದಿ

ಬೆಂಗಳೂರು: ಡಿ.ಕೆ.ಶಿವಕುಮಾರ್ ಅವರು ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕಾರ ಮಾಡುತ್ತಿದ್ದಂತೆಯೇ ಆಡಳಿತ ಯಂತ್ರಕ್ಕೆ ಚುರುಕು ಮುಟ್ಟಿಸಲು ಮುಂದಾಗಿದ್ದಾರೆ.

ಗುರುವಾರ ವಿಧಾನಸೌಧದಲ್ಲಿ ರಾಜ್ಯದ ಎಲ್ಲಾ ಇಲಾಖೆಗಳ ಕಾರ್ಯದರ್ಶಿಗಳ ವಿಶೇಷ ಸಭೆ ನಡೆಸಿ, ರಾಜ್ಯದ ಅಭಿವೃದ್ಧಿ, ಕಾನೂನು ಸುವ್ಯಸ್ಥೆ ಹಾಗು ಸಾರ್ವಜನಿಕರ ಸಮಸ್ಯೆಗೆ ಸ್ಪಂದಿಸುವ ಕುರಿತು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಅಧಿಕಾರಿಗಳಿಂದ ಉತ್ತಮ ಕೆಲಸದ ನಿರೀಕ್ಷೆ ಹೊಂದಿದ್ದೇನೆ. ಅದಕ್ಕೆ ತಕ್ಕಂತೆ ಯಾವುದೇ ಒತ್ತಡಕ್ಕೆ ಮಣಿಯದೆ ಜನರ ಕೆಲಸ ಮಾಡಬೇಕು. ನಮ್ಮ ಸರ್ಕಾರದಲ್ಲಿ ಜಾತಿ, ಧರ್ಮ ಸೇರಿ ಯಾವುದೇ ಪ್ರಭಾವ ನಡೆಯಲ್ಲ, ಎಲ್ಲಾ ಇಲಾಖೆಗಳ ಬಾಕಿ ಕೆಲಸದ ಪಟ್ಟಿಯನ್ನು 25 ದಿನದೊಳಗೆ ಸಲ್ಲಿಸಬೇಕೆಂದು ಸೂಚಿಸಿದರು.

ಜನ ಮೆಚ್ಚುವಂತಹ ಆಡಳಿತ ನೀಡುವುದು, ಸಾರ್ವಜನಿಕರ ಸಂಕಷ್ಟಗಳನ್ನು ಬಗೆಹರಿಸುವುದು ಮತ್ತು ಅಭಿವೃದ್ಧಿಯನ್ನು ಸುಗಮಗೊಳಿಸುವುದು ತಮ್ಮ ಸರ್ಕಾರದ ಮುಖ್ಯ

ಉದ್ದೇಶ. ಸರ್ಕಾರ ಮತ್ತು ಜನರ ನಡುವೆ ಸೇತುವೆಯಾಗಿ ಕಾರ್ಯ ನಿರ್ವಹಿಸುವ ಅಧಿಕಾರಿಗಳ ಪಾತ್ರವನ್ನು ಮನವರಿಕೆ ಮಾಡಿಕೊಟ್ಟರು. ಯಾವುದೇ ಇಲಾಖೆಯಲ್ಲಿ ಭ್ರಷ್ಟಾಚಾರಕ್ಕೆ ಅವಕಾಶ ನೀಡಬಾರದು. ಸರ್ಕಾರದ ಸುಗಮ ಆಡಳಿತಕ್ಕೆ ಅಧಿಕಾರಿಗಳೇ ಬೆನ್ನೆಲುಬು. ಹೀಗಾಗಿ ಅಧಿಕಾರಿಗಳು ಸಾರ್ವಜನಿಕರ ಕಷ್ಟಗಳಿಗೆ ತಕ್ಷಣ ಸ್ಪಂದಿಸಬೇಕು. ಸರ್ಕಾರದ ಯೋಜನೆಗಳು ಸಮರ್ಥವಾಗಿ ಜನರಿಗೆ ತಲುಪಿಸಬೇಕು. ಅಭಿವೃದ್ಧಿ ಹಾದಿಗೆ ಮೆಟ್ಟಿಲಾಗಿ ಮೆಚ್ಚುವಂತೆ ಕೆಲಸ ಮಾಡಬೇಕೆಂದು ನಯವಾಗಿಯೇ ಅಧಿಕಾರಿಗಳಿಗೆ ಸಲಹೆ ಸೂಚನೆಗಳನ್ನು ನೀಡಿದ್ದಾರೆ.

» ನಾಲ್ಕನೇ ಪುಟದಲ್ಲಿ

ನ್ಯಾಯಾಲಯದ ಮುಂದೆ ವಾಮಾಚಾರ: ಮಹಿಳೆಗೆ 5 ಸಾವಿರ ರೂ.ದಂಡ

• ಪ್ರಜೋದಯ ವರದಿ

ಹಾಸನ: ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ಆವರಣದ ಎದುರು ವಾಮಾಚಾರ ಮಾಡಿ ಸಾರ್ವಜನಿಕರಲ್ಲಿ ಭಯ ಹುಟ್ಟಿಸಿದ್ದ ಮಹಿಳೆಗೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ 5 ಸಾವಿರ ರೂ. ದಂಡ ವಿಧಿಸಿದೆ.

ಕ್ರಿಮಿನಲ್ ಪ್ರಕರಣವೊಂದರ ಆರೋಪಿಯಾಗಿರುವ ಚಂದ್ರಿಕಾ ಎಂಬ ಮಹಿಳೆ ಬೆಳಗಿನ ಜಾವ 8.30ರ ವೇಳೆಗೆ ನ್ಯಾಯಾಲಯದ ಮುಂಭಾಗ ನಿಂಬೆಹಣ್ಣು ಮಂತ್ರಿಸಿ, ಕಾಯಿ ಒಡೆಯುವ ಮೂಲಕ ವಾಮಾಚಾರ ನಡೆಸುತ್ತಿರುವಂತೆ ವರ್ತಿಸಿದ್ದಾಳೆ. ಕರ್ತವ್ಯದಲ್ಲಿದ್ದ ನ್ಯಾಯಾಲಯದ ಭದ್ರತಾ ಸಿಬ್ಬಂದಿ ಆಕೆಯನ್ನು ವಶಕ್ಕೆ ಪಡೆದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಮುಂದೆ ಹಾಜರುಪಡಿಸಿದರು.

ವಿಚಾರಣೆ ವೇಳೆ ಮಹಿಳೆ ತಾನು ಮನೆ ದೇವರ ಪೂಜೆ ಮಾಡುತ್ತಿದ್ದುದಾಗಿ ತಿಳಿಸಿದ್ದಾಳೆ. ಆಕೆಯ ನಡೆ

ಸಾರ್ವಜನಿಕರಲ್ಲಿ ಭೀತಿ ಹುಟ್ಟಿಸುವಂತಿದ್ದು, ನ್ಯಾಯಾಲಯದ ವಾತಾವರಣಕ್ಕೆ ಧಕ್ಕೆಯಾಗುವ ಸಾಧ್ಯತೆ ಇರುವುದನ್ನು ನ್ಯಾಯಾಲಯ ಗಂಭೀರವಾಗಿ ಪರಿಗಣಿಸಿತು. ಪ್ರಕರಣದ ವಿಚಾರಣೆ ನಡೆಸಿದ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಹೇಮಾವತಿ ಅವರು, ಸಾರ್ವಜನಿಕರಲ್ಲಿ ಅನಗತ್ಯ ಆತಂಕ ಮತ್ತು ಭಯ ಸೃಷ್ಟಿಸುವ ರೀತಿಯ ಕೃತ್ಯಗಳನ್ನು ಸಹಿಸಲಾಗುವುದಿಲ್ಲವೆಂದು ಮಹಿಳೆಗೆ 5 ಸಾವಿರ ರೂ. ದಂಡ ವಿಧಿಸಿದ್ದಾರೆ. ದಂಡ ಪಾವತಿಸಲು ವಿಫಲವಾದಲ್ಲಿ ಎರಡು ದಿನಗಳ ಸಾದಾ ಕಾರಾಗೃಹ ಶಿಕ್ಷೆ ಅನುಭವಿಸುವಂತೆ ಆದೇಶಿಸಿದ್ದಾರೆ.

ಕೃಷಿ ಪರಿಕರ ಸಕಾಲದಲ್ಲಿ ದೊರೆಯುವಂತೆ ನೋಡಿಕೊಳ್ಳಿ

ಹೆಚ್ಚಿನ ಬೆಲೆಗೆ ರಸಗೊಬ್ಬರ ಮಾರಾಟ ಮಾಡಿದರೆ ಕ್ರಮ: ಶ್ರೇಯಸ್ ಪಟೇಲ್ ಎಚ್ಚರಿಕೆ

• ಪ್ರಜೋದಯ ವರದಿ

ಹಾಸನ : ಅಗತ್ಯ ಕೃಷಿ ಪರಿಕರಗಳು ಸಕಾಲದಲ್ಲಿ ರೈತರಿಗೆ ದೊರೆಯುವಂತೆ ನೋಡಿಕೊಳ್ಳಬೇಕು. ರಸಗೊಬ್ಬರವನ್ನು ನಿಗದಿತ ದರಕ್ಕಿಂತ ಹೆಚ್ಚಿನ ಬೆಲೆಗೆ ಮಾರಾಟ ಮಾಡುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳ ಬೇಕೆಂದು ಸಂಸದ ಶ್ರೇಯಸ್ ಪಟೇಲ್ ಅವರು ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಜಂಟಿ ಕೃಷಿ ನಿರ್ದೇಶಕರ ಕಚೇರಿಯಲ್ಲಿ ಗುರುವಾರ ಬಿತ್ತನೆ ಬೀಜ, ರಸಗೊಬ್ಬರ ಹಾಗು ಕೃಷಿ ಪರಿಕರಗಳ ಲಭ್ಯತೆ, ವಿತರಣೆಯ ಕುರಿತು ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಬಿತ್ತನೆ ಬೀಜ, ರಸಗೊಬ್ಬರ ಕೊರತೆ ಉಂಟಾಗದಂತೆ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳ ಬೇಕು. ರೈತ ಸಂಪರ್ಕ ಕೇಂದ್ರ ಗಳು ಹಾಗು ಡೀಲರ್‌ಗಳು ಬಿತ್ತನೆ ಬೀಜದ ಹೆಸರು, ಲಾಟ್ ಸಂಖ್ಯೆ ನಮೂದಿಸಿ ಬಿಲ್ ನೀಡುವುದನ್ನು ಕಡ್ಡಾಯ ಗೊಳಿ

ಸಬೇಕೆಂದು ನಿರ್ದೇಶನ ನೀಡಿದರು.

ಪರ್ಯಾಯ ಬೆಳೆಗಳ ಮಾಹಿತಿ ನೀಡಿ

ಬಿಳಿಸುಳಿ ರೋಗ ನಿಯಂತ್ರಣಕ್ಕೆ ಅಗತ್ಯ ಔಷಧಗಳನ್ನು ಸಾಕಷ್ಟು ಪ್ರಮಾಣದಲ್ಲಿ ದಾಸ್ತಾನು ಮಾಡಿಕೊಳ್ಳ ಬೇಕು. ಮುಂಗಾರು ಮಳೆ ಕೊರತೆಯ ಹಿನ್ನಲೆ ಪರ್ಯಾಯ ಬೆಳೆಗಳ ಕುರಿತು ರೈತರಿಗೆ ಮಾಹಿತಿ ನೀಡಬೇಕು. ಅಗತ್ಯ ಕೃಷಿ ಪರಿಕರಗಳ ಕೊರತೆ ಉಂಟಾಗದಂತೆ ಕೃಷಿ ಇಲಾಖೆ ಅಧಿಕಾರಿಗಳು ನಿರಂತರ ನಿಗಾ ವಹಿಸಬೇಕೆಂದು ಸೂಚಿಸಿದರು.

> ಬೆಳೆ ವಿಮೆ ನೋಟಿಫಿಕೇಷನ್ ಬಂದ ಕೂಡಲೇ ವಿಷಯದ ಕುರಿತು ಪತ್ರಿಕಾ ಪ್ರಕಟಣೆ ನೀಡಿ ರೈತರಿಂದ ಬೆಳೆ ವಿಮೆ ಕಟ್ಟಿಸಲು ಸೂಕ್ತ ಕ್ರಮವಹಿಸಬೇಕು. ರೈತ ಸಂಪರ್ಕ ಕೇಂದ್ರಗಳಿಗೆ ಬರುವ ರೈತರಿಗೆ ಕೃಷಿ ಅಧಿಕಾರಿಗಳು ತಾಳ್ಮೆಯಿಂದ ವರ್ತಿಸಿ ಅವರಿಗೆ ಪರಿಕರಗಳನ್ನು ವಿತರಿಸುವ ಜೊತೆಗೆ ತಾಂತ್ರಿಕ ಮಾಹಿತಿ ನೀಡಬೇಕು.
> -ಶ್ರೇಯಸ್ ಪಟೇಲ್, ಸಂಸದ

54,809 ಮೆಟ್ರಿಕ್ ಟನ್ ಗೊಬ್ಬರ ದಾಸ್ತಾನು

ಜಂಟಿ ಕೃಷಿ ನಿರ್ದೇಶಕ ರಮೇಶ್ ಮಾತನಾಡಿ, ಮುಂಗಾರು ಹಂಗಾಮಿನಲ್ಲಿ ರಸಗೊಬ್ಬರ, ಬಿತ್ತನೆ ಬೀಜಗಳ ಕೊರತೆ ಉಂಟಾಗದಂತೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈ ಗೊಳ್ಳಲಾಗಿದೆ. ಜಿಲ್ಲೆಯಾದ್ಯಂತ 54, 809 ಮೆಟ್ರಿಕ್ ಟನ್ ರಸಗೊಬ್ಬರ ದಾಸ್ತಾನು ಲಭ್ಯವಿದೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ 571 ಖಾಸಗಿ ಹಾಗು 172 ಸಹಕಾರ ಸಂಘಗಳು ಸೇರಿ ಒಟ್ಟು 743 ರಸಗೊಬ್ಬರ ಮಾರಾಟ ಮಳಿಗೆವಗಳು ಕಾರ್ಯನಿರ್ವಹಿಸುತ್ತಿವೆ. 111 ಸಗಟು ಡೀಲರ್‌ಗಳ ಮೂಲಕವೂ ರಸಗೊಬ್ಬರ ವಿತರಣೆ ನಡೆಯುತ್ತಿದೆ. ಏಪ್ರಿಲ್‌ನಿಂದ ಸೆಪ್ಟೆಂಬರ್‌ವರೆಗೆ ವಿವಿಧ ರೀತಿಯ ರಸಗೊಬ್ಬರಗಳಿಗೆ 1.64 ಲಕ್ಷ ಮೆಟ್ರಿಕ್ ಟನ್ ಬೇಡಿಕೆ ಅಂದಾಜಿಸಲಾಗಿದೆ ಎಂದು ವಿವರಿಸಿದರು.

ಜಿಲ್ಲೆಯ ವಿವಿಧ ಗೋದಾಮುಗಳು, ಸಗಟು ಹಾಗು ಚಿಲ್ಲರೆ ಮಾರಾಟಗಾರರ ಬಳಿ 54,809 ಮೆಟ್ರಿಕ್ ಟನ್ ರಸಗೊಬ್ಬರ ಲಭ್ಯ ವಿದೆ. ಭತ್ತ, ರಾಗಿ, ಉದ್ದು, ಹೆಸರು, ಅಲಸಂದೆ, ತೊಗರಿ, ನೆಲಗಡಲೆ ಸೇರಿ ವಿವಿಧ ಬೆಳೆಗಳಿಗೆ ಅಗತ್ಯವಿರುವ ಬಿತ್ತನೆ ಬೀಜಗಳ ಸಂಗ್ರಹವೂ ಸಮ ರ್ಪಕವಾಗಿದೆ ಎಂದು ಸಭೆಗೆ ಮಾಹಿತಿ ನೀಡಿದರು.

ಕಳೆದ ವರ್ಷ ಮುಸುಕಿನ ಜೋಳದಲ್ಲಿ ಕಾಣಿಸಿಕೊಂಡಿದ್ದ ಬಿಳಿಸುಳಿ ರೋಗದ ಹಿನ್ನಲೆ, ಈ ಬಾರಿ ಗುಣಮಟ್ಟದ ಹಾಗು ರೋಗಮುಕ್ತ ಬಿತ್ತನೆ ಬೀಜಗಳನ್ನಷ್ಟೇ ರೈತರಿಗೆ ವಿತರಿಸಲು ಕ್ರಮ ಕೈಗೊಳ್ಳಲಾಗಿದೆ. ಮಂಡ್ಯದ ಕೃಷಿ ವಿಶ್ವವಿದ್ಯಾಲಯದಲ್ಲಿ ಪರೀಕ್ಷೆಗೊಳಪಡಿಸಿದ ಬೀಜಗಳನ್ನೇ ಸರಬರಾಜು ಮಾಡಲು ಸೂಚಿಸಲಾ ಗಿದೆ ಎಂದು ಹೇಳಿದರು.

ರಸಗೊಬ್ಬರ ಕಾಳಸಂತೆಯಲ್ಲಿ ಹಾಗು ಅಕ್ರಮ ಮಾರಾಟವನ್ನು ತಡೆಯಲು ಎಫ್‌ಐಡಿ ಆಧಾರಿತ ಪಾರದರ್ಶಕ ವಿತರಣಾ ವ್ಯವಸ್ಥೆಯನ್ನು ಕಟ್ಟುನಿಟ್ಟಾಗಿ ಅನುಸರಿಸಬೇಕು.

» ನಾಲ್ಕನೇ ಪುಟದಲ್ಲಿ

ಜಿಲ್ಲೆಯಲ್ಲಿ ಶೇ.19 ರಷ್ಟು ಮಳೆ ಕೊರತೆ

ಪ್ರಸಕ್ತ ವರ್ಷ ಜಿಲ್ಲೆಯಲ್ಲಿ ಈವರೆಗೆ ಶೇ.19ರಷ್ಟು ಮಳೆ ಕೊರತೆ ದಾಖಲಾಗಿದ್ದರೂ, ಇತ್ತೀಚೆಗೆ ಸುರಿದ ಉತ್ತಮ ಮಳೆಯಿಂದ ಬಿತ್ತನೆ ಚಟುವಟಿಕೆ ಆರಂಭವಾಗಿದೆ. ಸುಮಾರು 15 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ನಡೆದಿದೆ ಎಂದು ಜಂಟಿ ಕೃಷಿ ನಿರ್ದೇಶಕ ರಮೇಶ್ ಅವರು ಸಭೆಗೆ ಮಾಹಿತಿ ನೀಡಿದರು.

ಕೆ.ಎಂ.ಶಿವಲಿಂಗೇಗೌಡಗೆ ಸಚಿವ ಸ್ಥಾನ ಸಿಗುವುದು ಖಚಿತ

ಹೈಕಮಾಂಡ್ ಭರವಸೆ ನೀಡಿದೆ: ಸಂಸದ ಶ್ರೇಯಸ್

• ಪ್ರಜೋದಯ ವರದಿ

ಹಾಸನ: ಸಚಿವ ಸಂಪುಟದ ಎರಡನೇ ಪಟ್ಟಿಯಲ್ಲಿ ಜಿಲ್ಲೆಗೆ ಪ್ರಾತಿನಿಧ್ಯ ನೀಡಲಾಗುವುದೆಂದು ಹೈಕಮಾಂಡ್ ಭರವಸೆ ನೀಡಿದೆ. ಹಿರಿಯ ಶಾಸಕ ಕೆ.ಎಂ.ಶಿವಲಿಂಗೇಗೌಡ ಅವರು ಸಚಿವರಾಗುವುದು ಖಚಿತವೆಂದು ಸಂಸದ ಶ್ರೇಯಸ್ ಪಟೇಲ್ ಅವರು ತಿಳಿಸಿದರು.

ಗುರುವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಿಲ್ಲಾ ಉಸ್ತುವಾರಿಯಾಗಿ ಕೃಷ್ಣ ಬೈರೇಗೌಡ ಅವರು ಉತ್ತಮವಾಗಿ ಕೆಲಸ ಮಾಡಿದ್ದಾರೆ. ಆದರೆ, ನಮ್ಮ ಜಿಲ್ಲೆಯವರೇ ಸಚಿವರಾದರೆ ಇಲ್ಲಿನ ಜನರ ಕಷ್ಟ-ಸುಖ, ಅಭಿವೃದ್ಧಿಯ ಬಗ್ಗೆ ಸ್ಥಳೀಯರಿಗೆ ಹೆಚ್ಚು ಅರಿ

ಇಂದು ವಿಶ್ವಪರಿಸರ ದಿನಾಚರಣೆ

ಗ್ರಾಮೀಣ ಪ್ರದೇಶದಲ್ಲಿ ಮರ ಗಿಡಗಳನ್ನು ಬೆಳೆಸುವ ಪರಿಪಾಠ ಕ್ಷೀಣಿಸಿ ಅವುಗಳ ಬುಡಕ್ಕೆ ಕೊಡಲಿ ಏಟು ನೀಡುತ್ತಿರುವ ಕಾಲಘಟ್ಟದಲ್ಲಿ ತಾಲ್ಲೂಕಿನ ಮದಲಾಪುರ ಗ್ರಾಮದ ಪರಿಸರ ಪ್ರೇಮಿ ಹಾಗೂ ಗ್ರಾಪಂ ಮಾಜಿ ಅಧ್ಯಕ್ಷ ಎಂ.ಆರ್. ರಂಗಸ್ವಾಮಿ ಅವರು ಗುಂಡು ತೋಪಿನಲ್ಲಿ ಬೆಳೆಸಿರುವ ಹಲವಾರು ಜಾತಿಯ ಗಿಡ ಮರಗಳು ಮುಗಿಲೆತ್ತರಕ್ಕೆ ಬೆಳೆದು ಪರಿಸರಕ್ಕೆ ಮಹತ್ತರವಾದ ಕೊಡುಗೆ ನೀಡಿವೆ.

ಈ ಭಾಗಕ್ಕೆ ಹೊಗೆಸೊಪ್ಪು ಬೆಳೆ ಕಾಲಿಟ್ಟ ನಂತರ ತಂಬಾಕು ಉತ್ಪಾದಿಸಲು ಅಪಾರ ಮೌಲ್ಯದ ಮರಗಳನ್ನು ಹನನ ಮಾಡಿದ್ದೆ ಹೆಚ್ಚು ಸುದ್ದಿಯಲ್ಲಿದೆ. ಆದರೆ ಇಲ್ಲೊರ್ವ ಅರೆಮಲೆನಾಡು ಪ್ರದೇಶವಾದ ಮಲ್ಲಿಪಟ್ಟಣ ಹೋಬಳಿ ಮದಲಾಪುರ ಗ್ರಾಮಕ್ಕೆ ವಿಶ್ವ ಪರಿಸರ ದಿನಾಚರಣೆ ವಿಶೇಷತೆ ಭಾಗವಾಗಿ ದಶಕದ ಹಿಂದೆ ಮಾಧ್ಯಮದವನ್ನು ಆಹ್ವಾನಿಸಿ ವನ ಸಂವರ್ಧನ ದಿನ ಕಾರ್ಯಕ್ರಮ ಆಯೋಜಿಸಿ ನೆಟ್ಟ ಕಾಡು ಮರಗಳು ಇಂದು ಹಸಿರು ಸಂಪತ್ತಾಗಿ ಬೆಳೆದಿವೆ.

ಗ್ರಾಮದ ಗುಂಡುತೋಪಿಗೆ ಹಸಿರು ಕಿರೀಟ ತೊಡಿಸಿದ ಪರಿಸರ ಪ್ರೇಮಿ ರಂಗಸ್ವಾಮಿ ಪರಿಸರ ದಿನಾಚರಣೆಯ ಸಂದರ್ಭದಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ಪರಿಸರ ಸಂರಕ್ಷಣೆಯ ಮಹತ್ವವನ್ನು ನೆನಪಿಸುವ ಹಲವಾರು ಉದಾಹರಣೆಗಳ ಪೈಕಿ, ಗ್ರಾಮದ ಪರಿಸರ ಪ್ರೇಮಿ ರಂಗಸ್ವಾಮಿ ಅವರ ಹಸಿರು ಸೇವೆ ಎಲ್ಲರ ಗಮನ ಸೆಳೆಯುತ್ತಿದೆ. ದಶಕದ ಹಿಂದೆ ತಮ್ಮೂರಿನ ಗುಂಡುತೋಪು ಪ್ರದೇಶದಲ್ಲಿ ಅವರು ನೆಟ್ಟಿದ್ದ ವಿವಿಧ ಕಾಡು ಜಾತಿಯ ಮರಗಳು ಇಂದು ದಟ್ಟ ಅರಣ್ಯದ ಸ್ವರೂಪ ಪಡೆದು ಪರಿಸರಕ್ಕೆ ಅಮೂಲ್ಯ ಕೊಡುಗೆಯಾಗಿ ಪರಿಣಮಿಸಿವೆ. ಅಂದು ನಿರ್ಜನ ಹಾಗೂ ಬಂಜರು ಪ್ರದೇಶದಂತಿದ್ದ ಗುಂಡುತೋಪು ಈಗ ಹಸಿರಿನಿಂದ ಕಂಗೊಳಿಸುತ್ತಿದೆ.

ಹೊನ್ನೆ, ಬೂರ್ಗ, ಹೊಂಗೆ, ಬೇವು, ನೇರಳೆ, ಹಲಸು, ಬಸುರಿ, ಮತ್ತಿ ಸೇರಿ ಅನೇಕ ಕಾಡು ಜಾತಿಯ ಸಸಿಗಳನ್ನು ರಂಗಸ್ವಾಮಿ ಅವರು ಸ್ವಂತ ಆಸಕ್ತಿ ಮತ್ತು ಪರಿಶ್ರಮದಿಂದ ನೆಟ್ಟಿದ್ದರು. ಸಸಿಗಳಿಗೆ ನೀರುಣಿಸುವುದು, ಜಾನುವಾರುಗಳಿಂದ ರಕ್ಷಿಸುವುದು ಹಾಗೂ ಅವುಗಳ ಬೆಳವಣಿಗೆ ಯನ್ನು ಕಾಳಜಿಯಿಂದ ಗಮನಿಸುವ ಮೂಲಕ ಅವುಗಳನ್ನು ಮರಗಳಾಗಿ ಬೆಳೆಸಿದ್ದಾರೆ.

ದಶಕದಿಂದ ನಿರಂತರವಾಗಿ ನಡೆಸಿದ ಈ ಪರಿಸರ ಸೇವೆಯ ಫಲವಾಗಿ ಇಂದು ನೂರಾರು ಮರಗಳು ಬೆಳೆದು ನಿಂತಿದ್ದು, ಪಕ್ಷಿಗಳು, ಸಣ್ಣ ಪ್ರಾಣಿಗಳು ಹಾಗೂ ವಿವಿಧ ಜೀವಿಗಳಿಗೆ ಆಶ್ರಯ ತಾಣವಾಗಿವೆ. ಈ ಮರಗಳು ಹೆಚ್ಚಿನ ಪ್ರಮಾಣದಲ್ಲಿ ಆಮ್ಲಜನಕವನ್ನು ಉತ್ಪಾದಿ ಸುವುದರ ಜೊತೆಗೆ ಪರಿಸರ ಸಮತೋಲನ ಕಾಪಾಡುವಲ್ಲಿ ಮಹತ್ವದ ಪಾತ್ರ ವಹಿಸುತ್ತಿವೆ.

ಸ್ಥಳೀಯ ನಿವಾಸಿಗಳ ಪ್ರಕಾರ, ಹಿಂದೆ ಬೇಸಿಗೆ ಕಾಲದಲ್ಲಿ ತೀವ್ರ ಉಷ್ಣತೆ ಕಂಡುಬರುತ್ತಿದ್ದ ಪ್ರದೇಶದಲ್ಲಿ ಈಗ ತಂಪಾದ ವಾತಾವರಣ ನಿರ್ಮಾಣವಾಗಿದೆ. ಮಳೆಯ ಪ್ರಮಾಣ ಹೆಚ್ಚಾಗಲು ಹಾಗೂ ಅಂತರ್ಜಲ ಮಟ್ಟ ಸುಧಾರಿಸಲು ಸಹ ಈ ಹಸಿರು ವನ ಸಹಕಾರಿಯಾಗಿದೆ ಎನ್ನಲಾಗಿದೆ.



ಪರಿಸರ ಸಂರಕ್ಷಣೆ ಕೇವಲ ಸರ್ಕಾರದ ಜವಾಬ್ದಾರಿ ಅಲ್ಲ, ಪ್ರತಿಯೊಬ್ಬ ನಾಗರಿಕನ ಕರ್ತವ್ಯ ಎಂಬುದನ್ನು ರಂಗಸ್ವಾಮಿ ಅವರು ತಮ್ಮ ಕಾರ್ಯದ ಮೂಲಕ ತೋರಿಸಿಕೊಟ್ಟಿದ್ದಾರೆ. ಅವರು ನೆಟ್ಟ ಮರಗಳು ಇಂದಿನ ಪೀಳಿಗೆಗೆ ನೆರಳು, ಶುದ್ಧ ಗಾಳಿ ಮತ್ತು ಪರಿಸರ ಜಾಗೃತಿಯ ಸಂದೇಶವನ್ನು ನೀಡುತ್ತಿವೆ.

ವಿಶ್ವ ಪರಿಸರ ದಿನಾಚರಣೆಯ ಸಂದರ್ಭದಲ್ಲಿ ರಂಗಸ್ವಾಮಿ ಅವರ ಈ ಸೇವೆ ಗ್ರಾಮಸ್ಥರಿಗೆ ಮಾತ್ರವಲ್ಲದೆ ಇಡೀ ಸಮಾಜಕ್ಕೆ ಮಾದರಿಯಾಗಿದೆ. ಒಂದು ಸಸಿ ನೆಟ್ಟರೆ ಅದು ಮುಂದಿನ ಪೀಳಿಗೆಗೆ ಅಮೂಲ್ಯ ಆಸ್ತಿಯಾಗುತ್ತದೆ ಎಂಬುದಕ್ಕೆ ಅವರ ಹಸಿರು ಸಾಧನೆ ಜೀವಂತ ಸಾಕ್ಷಿಯಾಗಿದೆ.

ಪರಿಸರವನ್ನು ಉಳಿಸುವ ನಿಟ್ಟಿನಲ್ಲಿ ಯುವಜನತೆ ಸೇರಿದಂತೆ ಎಲ್ಲರೂ ಮರಗಳನ್ನು ನೆಟ್ಟು ಅವುಗಳನ್ನು ಪೋಷಿಸುವ ಸಂಕಲ್ಪ ಕೈಗೊಳ್ಳಬೇಕೆಂಬ ಸಂದೇಶವನ್ನು ರಂಗಸ್ವಾಮಿ ಅವರ ಮೂರು ದಶಕಗಳ ಹಸಿರು ಸೇವೆ ಸಾರುತ್ತಿದೆ. ಎಲ್ಲಾ ಗಿಡಗ ಳನ್ನು ಮಕ್ಕಳಂತೆ ಸಾಕಿ ಬೆಳೆಸಿದ್ದಕ್ಕೆ ಪರಿಸರಕ್ಕೆ ಉತ್ತಮ ಕೊಡುಗೆ ಕೊಟ್ಟ ಸಾರ್ಥಕಭಾವ ಮೂಡಿಸಿದೆ ಎನ್ನುತ್ತಾರೆ ರಂಗಸ್ವಾಮಿ.

-ರವಿ ದುಮ್ಮಿ

ಮದಲಾಪುರ ಗ್ರಾಮದ ಸರ್ಕಾರಿ ಶಾಲೆ ಹಿಂಭಾಗವೇ ಗುಂಡು ತೋಪಿನಲ್ಲಿ ಪರಸರ ಪ್ರೇಮಿ ರಂಗಸ್ವಾಮಿ ಅವರು ಗಿಡ ಮರಗಳನ್ನು ಬೆಳೆಸಿರುವುದರಿಂದ ಶಾಲೆಯ ವಾತಾವರಣ ಕೂಡ ತಂಪಾಗಿದೆ.
–ಜಯಸ್ವಾಮಿ, ಮುಖ್ಯ ಶಿಕ್ಷಕ.

ಗಿಡ ಮರಗಳನ್ನು ಬೆಳೆಸದೆ ಪರಿಸರ ನಾಶಗೊಳಿಸುವುದು ಪಾಪದ ಕೆಲಸ. ಮರಗಳನ್ನು ನೆಟ್ಟು ಬೆಳೆಸುವುದು ಕೇವಲ ಪ್ರಕೃತಿಗೆ ಕೊಡುಗೆಯಲ್ಲ, ಅದು ಮುಂದಿನ ಪೀಳಿಗೆಗೆ ನಾವು ನೀಡುವ ಅಮೂಲ್ಯ ಉಡುಗೊರೆಯಾಗಿದೆ. ಇಂದು ನಾವು ಬೆಳೆಸುವ ಪ್ರತಿಯೊಂದು ಮರವು ನಾಳೆಯ ಶುದ್ಧ ಗಾಳಿ, ನೆರಳು ಮತ್ತು ಜೀವ ವೈವಿಧ್ಯದ ಆಶ್ರಯವಾಗುತ್ತದೆ. ಒಂದು ಗಿಡ ನೆಟ್ಟರೆ ಒಂದು ಜೀವ ಉಳಿಸಿದಂತೆ ಒಂದು ಕಾಡು ಬೆಳೆಸಿದರೆ ಒಂದು ಭವಿಷ್ಯ ನಿರ್ಮಿಸಿದಂತೆ. ಪರಿಸರ ಸಂರಕ್ಷಣೆ ಮಾತಿನಲ್ಲಿ ಅಲ್ಲ, ಮರಗಳನ್ನು ನೆಟ್ಟು ಅವುಗಳನ್ನು ಬೆಳೆಸುವ ಕಾರ್ಯದಲ್ಲಿ ಅಡಗಿದೆ. ದಶಕದ ಹಿಂದೆ ತಮ್ಮೂರಿನಲ್ಲಿ ವನ ಸಂವರ್ಧನ ದಿನ ಹೆಸರಿನಲ್ಲಿ ಪರಿಸರ ಕಾರ್ಯ ಕ್ರಮ ನಡೆಸಿ ಗುಂಡು ತೋಪಿನಲ್ಲಿ ನೆಟ್ಟ ವಿವಿಧ ಕಾಡು ಜಾತಿಯ ನೂರಾರು ಗಿಡಗಳು ಇಂದು ಹೆಮ್ಮರವಾಗಿ ಬೆಳೆಸಿರುವುದು ಸಂತಸ ತಂದಿದೆ.
–ಎಂ.ಆರ್.ರಂಗಸ್ವಾಮಿ, ಪರಿಸರ ಪ್ರೇಮಿ.

ಇದನ್ನ ಕೈಲಾಸ ಅಂದುಕೊಂಡು ಶಿವನನ್ನು ನೋಡಲು ಹೊರಟುಬಿಟ್ಟಿದ್ದೆಯಾ..?

ನೀವು ನನ್ನನ್ನು ಸರಪಳಿಯಲ್ಲಿ ಬಂಧಿಸಬಹುದು, ನೀವು ನನ್ನನ್ನು ಹಿಂಸಿಸಬಹುದು, ನೀವು ಈ ದೇಹವನ್ನು ಸಹ ನಾಶಪಡಿಸಬಹುದು. ಆದರೆ ನೀವು ಎಂದಿಗೂ ನನ್ನ ಮನಸ್ಸನ್ನು ಬಂಧಿಸಲಾಗುವುದಿಲ್ಲ.
–ಮಹಾತ್ಮ ಎಂ.ಕೆ.ಗಾಂಧಿ

ಮಾಳೇಟಿರ ಸೀತಮ್ಮ ವಿವೇಕ್ ಅವರ ಇತ್ತೀಚಿನ ವಿವೇಕಜ್ಞಾನ ಕೃತಿ ಮನಸ್ಸು. ಇದು ಕೊಡವ ಭಾಷೆಗೆ ತರ್ಜುಮೊಗೊಂಡ ಕೊಡವ ಚರಿತ್ರೆ ಪುಸ್ತಕವೊಂದರ ನಂತರ ಮೂಡಿ ಬರುತ್ತಿರುವ ನನ್ನ ಚೊಚ್ಚಲ ಕನ್ನಡ ಕೃತಿಯಾಗಿದೆ ಎನ್ನುವ ಮೇಡಂ ಅವರ ತವರು ಮನೆ ಹೆಸರು ಕಂಬೀರಂಡ. ಮೂರ್ನಾಡು ಬಾಡಗ ಗ್ರಾಮ. ಕೊಡಗು ಜಿಲ್ಲೆ. ಚರಿತ್ರೆ ಅಧ್ಯಯನ ಗಾರ್ತಿಯಾದ ಅವರ ಮನಸ್ಸು ಕೃತಿ ಸಾಕಷ್ಟು ಅಧ್ಯಯನ ನಡೆಸಿ ವಿಶಿಷ್ಟ ಮಾಹಿತಿ ಅನುಭವ ಗಳನ್ನು ಕ್ರೋಢೀಕರಿಸಿ ಬರೆದ ಕೃತಿ.

ಮಾನವ ಜೀವನದ ಅತಿ ಮಹತ್ವದ ಆದರೆ ಅತೀ ಅಲಕ್ಷಿತ ಶಕ್ತಿ ಮನಸ್ಸು. ಇದು ಕಾಣುವುದಿಲ್ಲ, ಕಾಣಿಸಿಕೊಳ್ಳುವ ಎಲ್ಲರಿಗೂ ಇದು ಸ್ಪರ್ಶಿಸಬಹುದಾದದ ಅಂಗವೂ ಅಲ್ಲ. ಅದರ ಪ್ರತಿಯೊಂದು ಅನುಭವದ ಸ್ಪಂದನ. ಅದರಿಂದಲೇ ಈ ಕೃತಿಯಲ್ಲಿ ಕಾಣುವ ಮನಏವಂ ಮನುಷ್ಯಾಣಾಂ ಕಾರಣಂ ಬಂಧಂ ಮೋಕ್ಷಯೋ ಎಂಬ ಪುರಾತನ ತತ್ತ್ವ ವಾಕ್ಯವು ಮನಸ್ಸಿನ ಸ್ವಭಾವವನ್ನು ನೇರವಾಗಿ ಸ್ಪಷ್ಟಪಡಿಸುತ್ತದೆ. ಮನಸ್ಸೆ ಬಂಧನಕ್ಕೂ ಕಾರಣ, ಅದೇ ಮುಕ್ತಿಗೂ ದಾರಿ ಎಂದಿದ್ದಾರೆ ಇವರ ಪತಿ ಮಾಳೇಟಿರ ವಿವೇಕಾನಂದ ಪೊನ್ನಪ್ಪನವರು.

ಮನಸ್ಸು ಒಂದು ಅಗೋಚರ ಅತೀಂದ್ರಿಯ ಶಕ್ತಿಯಾಗಿದೆ. ಹೆಣ್ಣು ಗಂಡೆನ್ನದೆ ಸರ್ವರೊಳಗೂ ಇರುವ ಮನಸ್ಸು ಪ್ರತಿಯೊಬ್ಬರಿಗಿರುವ ಅವರವರ ದೇಹದೊಂದಿಗೆ ಜೀವಮಾನವೆಲ್ಲ ಚಲಿಸುವ, ದೈಹಿಕ ಅರಿಹಂತಗಳಿಂದ ಸಮ್ಮಿಳಿತವಾಗಿರುವ ಅತೀಂದ್ರಿಯವಾಗಿದೆ. ಬುವಿ ಯಲ್ಲಿ ರೂಪ ತಾಳುವ ದೇಹದೊಂದಿಗೆ ಗಾಢವಾದ ನಂಟು ಬೆಸೆದುಕೊಂಡಿರುವ ಮನಸ್ಸಿಗೆ ಘಾಸಿಯಾದರೆ ಇಡೀ ಶರೀರವೇ ನಾಶವಾಗುತ್ತದೆ. ಅಂತಹ ಘನತ್ತರವಾದ ನಮ್ಮೊಳಗೆ ಇರುವ ಮನ: ಮಾತೃಕೆಯ ಬಗ್ಗೆ ಯಾರೂ ಹೆಚ್ಚಿನ ಗಮನ ಹರಿಸದೆ ಇರುವುದರಿಂದಲೇ ನಾವು ಮಾತ್ರವಲ್ಲದೆ ಕುಟುಂಬ, ಸಮಾಜ, ದೇಶವೇ ಏರುಪೇರು ದೃಷ್ಟಿಕೊನವನ್ನು ಹೊಂದಿದೆ.

ಮಾನವ ಸಂಘ ಜೀವಿ. ಎಲ್ಲರ ಮನಸ್ಸಿಗುಒಟ್ಟಿಗೆ ಬಾಳುವುದೇ ಪ್ರಧಾನ ಬಯಕೆ ಆಗಿರುತ್ತದೆ. ಹಾಗೆಂದು ಒಟ್ಟಿಗೆ ಬಾಳುವುದು ಸುಲಭದ ಮಾತಲ್ಲ. ನನಗೆ ಜಿ.ಎಸ್. ಶಿವರುದ್ರಪ್ಪನವರ ಎಲ್ಲೊ ಹುಡುಕಿದೆ ಇಲ್ಲದ ದೇವರ ಕಲ್ಲುಮಣ್ಣುಗಳ ಗುಡಿಯೊಳಗೆ ಎಂಬ ಭಾವಗೀತೆ ನೆನಪಾಗುತ್ತದೆ. ಅದರಲ್ಲಿನ ಹತ್ತಿರವಿದ್ದು ದೂರ ನಿಲ್ಲುವೆವು ನಮ್ಮ ಅಹಂಮ್ಮಿನ ಕೋಟೆಯಲ್ಲಿ. ಹೊಂದಿಕೆ ಎಂಬುದು ಎಷ್ಟು ಕಷ್ಟವೋ ನಾಲ್ಕು ದಿನದ ಈ ಬಾಳಿನಲಿ.. ಹೌದು ಮನಸ್ಸಿನ ಅರಿವಿಕೆ ಇಲ್ಲದೆ ಇರುವುದೇ ಆ ಹೊಂದಿಕೆ ಸಾಧ್ಯವಾಗದೆ ಇರಲು ಕಾರಣ.

ಮೇಡಂ ಅವರು ತಮ್ಮ ವೈಯಕ್ತಿಕ ಜೀವನಾನುಭವಗಳನ್ನು ಆತ್ಮ ಪರಿಶೀಲನೆಯ ಕಣ್ಣಿನಿಂದ ನೋಡುತ್ತಾ, ಸಂಕಟಗಳನ್ನು ಜ್ಞಾನವಾಗಿ ಪರಿವರ್ತಿಸುವ ಪ್ರಯತ್ನ ಮಾಡಿದ್ದಾರೆ. ಕೊಡಗಿನ ಪ್ರಕೃತಿ ವಾತಾವರಣದಲ್ಲಿ ಬೆಳೆದ ಬಾಲ್ಯ, ವಿಭಿನ್ನ ಸಂಸ್ಕೃತಿಗಳ ಅನುಭವ,

ಜೀವನದ ಕಠಿಣ ಘಟ್ಟಗಳು, ಆರೋಗ್ಯ ಸಂಕಟಗಳು, ಆತ್ಮ ಅನ್ವೇಷಣೆಯ ಕ್ಷಣಗಳು ಇವೆಲ್ಲವೂ ಈ ಕೃತಿಗೆ ಜೀವ ತುಂಬಿವೆ. ಹಿಮಾಚಲ ಪ್ರದೇಶದ ರೋಹತಂಗ್ ಪಾಸ್‌ನಲ್ಲಿ ಸಂಭವಿಸಿದ ಮರಣ ಭಯದ ಅನುಭವ ದಾಖಲಿಸುತ್ತಾರೆ.

ನಮ್ಮ ಕುಟುಂಬ ಹಿಮಾಚಲ ಪ್ರದೇಶಕ್ಕೆ ಪ್ರವಾಸ ತೆರಳಿ ಮನಾಲಿಯ ಹಿಡಿಂಬ ದೇವಸ್ಥಾನ ಸಮೀಪದಿಂದ ಸುಮಾರು 5 ಸಾವಿರ ಮೀ.ಗಿಂತಲೂ ಎತ್ತರದ ರೋಹತಂಗ್ ಪಾಸ್‌ನ ಪರ್ವತದೆಡೆ ಪ್ರಯಣ ಬೆಳಸಬೇಕಿತ್ತು. ಅದು ಹಿಮ ಪರ್ವತವಾಗಿ ಸ್ಥಳೀಯರು ಬೆಚ್ಚಗಿನ ಮೈಹೊದಿಕೆ ಹಾಕಿಕೊಳ್ಳುವಂತೆ ಹೇಳಿದ್ದರು. ನಾವು ಅದೇ ರೀತಿ ತಯಾರಾಗಿ ಹೊರಟೆವು. ಅನೇಕ ತಿರುವುಗಳ ರಸ್ತೆ. ಕ್ರಮಿಸಬೇಕಾಗಿದ್ದ ಎತ್ತರ ನಾವಿದ್ದ ಸ್ಥಳದಿಂದ ತುಂಬಾ ಮೇಲೆ ಮೋಡ ಹರಡಿಕೊಂಡಂತೆ ಇತ್ತು. ಹಾಗಾಗಿ ನಮ್ಮ ವಾಹನದ ಚಾಲಕ ನಮಗೆ ಶ್ವಾಸಕೋಶ ಸಂಬಂಧಿ ತೊಂದರೆ ಇರುವವರಿಗೆ ಆಮ್ಲಜನಕ ಕೊರತೆ ಬಾಧಿಸಬಹುದೆಂದು ಮುನ್ಸೂಚನೆ ನೀಡಿದ್ದರು. ನನ್ನ ತಾಯಿಗೆ ಉಬ್ಬಸದ ಸಮಸ್ಯೆ ಇತ್ತು. ನಾವು ಅವರ ಬಗ್ಗೆ ಯೋಚಿಸುತ್ತಾ ವಾಹನದಲ್ಲಿ ಕುಳಿತು ಎಲ್ಲವನ್ನು ಅಹ್ಲಾದಿಸುತ್ತ ತುತ್ತ ತುದಿ ತಲುಪಿದೆವು. ಇನ್ನೇನು ಹಿಮ ಹರಡಿದ್ದ ಜಾಗ ಮುಟ್ಟಬೇಕು. ಅಷ್ಟು ಹತ್ತಿರದಲ್ಲಿ ಹಿಮಾವೃತ ಸುಂದರ ಪುಟ್ಟ ಗುಡ್ಡ! ಅದನ್ನು ನೋಡುತ್ತ ವಾಹನದಿಂದ ಎಲ್ಲರೂ ಖುಷಿಯಿಂದ ಇಳಿದರು. ಸುತ್ತಮುತ್ತಲ ದೃಶ್ಯಗಳು ವರ್ಣಿಸಲು ಅಸಾಧ್ಯ! ಸೌಂದರ್ಯ ಅಮೋಘ! ದೂರದಲ್ಲಿ ಹಿಮಚ್ಛಾದಿತ ಬೆಟ್ಟದ ತುದಿ ಯಲ್ಲಷ್ಟೇ ಸೂರ್ಯನ ಕಿರಣಗಳು ಹಾಯ್ದು ಬೆಟ್ಟ ಬೆಳ್ಳಿಯಂತೆ ಹೊಳೆಯುತ್ತಿತ್ತು. ಆ ಸೊಂಪನ್ನು ನೋಡ ನೋಡುತ್ತಿದ್ದಂತೆಯೇ ಆರೋಗ್ಯವಾಗಿದ್ದ ನಾನು ದೊಪ್ಪೆಂದು ಕುಸಿದ್ದು ಬಿದ್ದೆ! ಬಿದ್ದದ್ದು ನನಗೆ ತಿಳಿಯಲಿಲ್ಲ. ಎಷ್ಟು ಸಮಯದ ನಂತರ ಎಚ್ಚರವಾಯಿತು ತಿಳಿಯಲಿಲ್ಲ.

ಅಲ್ಲಿ ನಾನು ಎದ್ದು ಕುಳಿತಾಗ ಕಿವಿಗೆ ಬಿದ್ದದ್ದು ನನ್ನ ತಾಯಿಯ ಪ್ರಶ್ನೆ. ಇದನ್ನು ಕೈಲಾಸ ಅಂದುಕೊಂಡು ಶಿವನನ್ನು ನೋಡಲು ಹೊರಟು ಬಿಟ್ಟಿದ್ದೆಯಾ..ಎಂದು! ಆಗ ನಾನು ಅಲ್ಲಿದ್ದೆ. ಇಲ್ಲಿಗೆ ಹೇಗೆ ಬಂದೆ? ಎಷ್ಟು ಇಂಪಾದ ನಾದಗಳು ಅಹ್ಲಾದಕರ ಪರಿಮಳ ಅಲ್ಲಿ ಇದ್ದವಲ್ಲ ಎಂದಿದ್ದೆ. ಅಲ್ಲಿ ಆಗ ಬಿದ್ದಿದ್ದ ನನ್ನ ದೇಹದ ಸುತ್ತಲೂ ಜನ ಸೇರಿ ಮುಟ್ಟಿ ಉಪಚರಿಸುತ್ತಿದ್ದರೂ ಶರೀರಕ್ಕೆ ಯಾವುದೇ ಸ್ಪರ್ಶಾನುಭವ ಆಗುತ್ತಿಲ್ಲ! ಆದರೆ ನಾನು ಸಂಪೂರ್ಣ ಎಚ್ಚರವಾಗಿಯೇ ಇದ್ದೆ! ಮೊದಲೇ ನಾನು ಪ್ರಕೃತಿ ಸೌಂದರ್ಯ ತಲ್ಲೀನ ಅಪ್ಪಟ ಆರಾಧಕಿ. ಆ ಕಾರಣಕ್ಕೋ ಏನೋ ಯಾವ ಬೆಳ್ಳಿಬೆಟ್ಟ ನೋಡುತ್ತಿದ್ದೆನೋ ಅದರೆಡೆಗೆ ನಾನು ಆರಾಮಾಗಿ ಹೊಗುತ್ತಿದುದು ಚೆನ್ನಾಗಿಯೇ ತಿಳಿಯುತ್ತಿತ್ತು. ಹತ್ತಿರ ತಲುಪಿದಾಗ ಅದರ ಆಸುಪಾಸು ಇಂಪಾದ ನಾದ ಕೇಳಿ ಸುತ್ತಿತ್ತು. ಸುಂದರ ಹೂವಿನ ಪರಿಮಳ ಹರಡಿತ್ತು ಎಂದೂ ನೋಡಿರದ ಸುಂದರ ಪಕ್ಷಿಗಳು ಹಾರಾಡುತ್ತಾ ಇದ್ದಿದ್ದು ಗ್ರಹಿಸಿದ್ದೆ. ನೀರು ಹರಿಯುವ ನಾದ ಬರುತ್ತಿದ್ದ ಕಡೆ ಹೋಗಲು ಅಣಿಯಾದಾಗ ದೂರದಲ್ಲಿ ಹೃದಯಕ್ಕೆ ಹತ್ತಿರವಾಗಿ ನನ್ನನ್ನು ಕರೆಯುತ್ತಿರುವುದು ಕೇಳಿಸಿ ಆ ಕೂಗು ಬಂದ ಕಡೆಗೆ ಆ ಸುಂದರ ತಾಣ ಬಿಟ್ಟು ಹೊರಡಲು ಮನಸ್ಸಿಲ್ಲದಿದ್ದರೂ ಗುಡ್ಡದಿಂದ ಇಳಿಯುತ್ತ ಹತ್ತಿರ ತಲುಪಿದಾಗ..

ಮುಖಕ್ಕೆ ನೀರು ಚಿಮುಕಿಸಿ ಮೂಗಿಗೆ ಕರ್ಪೂರವನ್ನು ಮೂಸಿಸುತ್ತಿರುವ, ಕಾಲ್ಬೆರಳ ಕಳಚಿ ಕಾಲು ತಿಕ್ಕುತ್ತಿರುವ ದೈಹಿಕ ಅನುಭವಗಳಾದವು. ಅಲ್ಲಿ ಕಣ್ಣು ತುಂಬಿಕೊಂಡು ಕರೆಯುತ್ತಿದ್ದವರು ನನ್ನ ತಾಯಿ! ನನ್ನ ಪತಿ ತಂಗಿ ಮಗ ಎಲ್ಲರೂ ಕರೆಯುತ್ತಿದ್ದರೂ ಅಮ್ಮನ ಕೂಗು ಮಾತ್ರ ಕೇಳಿಸುತ್ತಿದ್ದದ್ದು ಮಾತ್ರ ವಿಚಿತ್ರ ಎನಿಸಿತು. ಅದೇ ಹೃದಯದ ಕೂಗು, ಎದೆಯಾಳದ ಕೂಗು ಎಂಬುದು ಅರಿವಾಯಿತು.

ಈ ದೇಹದಿಂದ ಪ್ರಜ್ಞೆ ಹೋಗುವಾಗ ಮತ್ತು ಬರುವಾಗ ಪೂರ್ಣಕತ್ತಲಲ್ಲಿ ಸಾಗಿದ್ದರೂ ಬರಿ ಕಣ್ಣಿಗೆ ಕಾಣದ ಪ್ರಕಾಶಮಾನವಾದ ಬೆಳಕಿನಲ್ಲಿ ಸಂಚರಿಸಿದ್ದೆ! ನನಗೆ ಕನಸುಗಳು ಸಾಕಷ್ಟು ಬಿದ್ದಿವೆ. ಆದರೆ ನನ್ನ ಮನಸ್ಸು 50-60 ಕಿ.ಮೀ. ದೂರದಷ್ಟಿದ್ದ ಬೆಟ್ಟದ ಸಮೀಪದವರೆಗೆ ದೇಹ ದೊಂದಿಗೆ ಪಯಣಿಸಿದಂತಹ ಅನುಭವ ಪಡೆದಿದ್ದು ಅದೂ ಪೂರ್ಣ ಪ್ರಜ್ಞೆಯಲ್ಲಿ ಎಂದಿಗೂ ಮರೆಯಲಾಗದು. ದೇಹಪ್ರಜ್ಞೆ ಕ್ಷೀಣಿಸಿದ ಕ್ಷಣ ಅನುಭವಿಸಿದ ಆಂತರಿಕ ಪ್ರಕಾಶ, ನಾದ, ಪರಿಮಳ, ಇವು ಮನಸ್ಸಿನ ಅತೀತ ಆಯಾಮಗಳ ಬಗ್ಗೆ ಆಳವಾದ ಚಿಂತನೆಗೆ ದಾರಿ ಮಾಡಿಕೊಟ್ಟಿವೆ. ಇದಾದ ನಂತರ ತಾಯಿ ತಂದೆ ಇರುವವರೆಗೂ ನಾನಾಗಿಯೇ ನನ್ನ ಮರಣವನ್ನೆಂದೂ ಬಯಸ ಬಾರದೆಂಬ ಮನಸ್ಸು ಬೆಳೆದಿದೆ. ಅಷ್ಟೇ ಅಲ್ಲ ಯಾರ ಮರಣವನ್ನೂ ಬಯಸಬಾರದು. ತದ್ವಿರುದ್ಧ ಗುಣದವರೊಂದಿಗೆ ಜೊತೆಯಲ್ಲೇ ವಾಸಿಸಬೇಕಾದಾಗಲೂ ಯಾರನ್ನೂ ದ್ವೇಷಿಸದೆ ನನ್ನ ಕರ್ತವ್ಯಗಳನ್ನು ಯಾವ ಕಾರಣಕ್ಕೂ ಕೈಬಿಡದೆ ಖುಷಿಯಿಂದ ಮಾಡುತ್ತಿರಬೇಕೆಂಬ ನಿಲುವು ತಾಳಿದೆ..

ಅದಾಗಿ ಮೇಡಂ ಧ್ಯಾನ ಯೋಗ ಸಾಧನೆ ಮೂಲಕ ಮಹರ್ಷಿ ಪ್ರಭಾಕರ್ ಗುರೂಜಿ, ಆಚಾರ್ಯ ಆದಿನಾಥ್, ಶ್ರೀ ರವಿಶಂಕರ್ ಆರ್ಟ್ ಆಫ್ ಲಿವಿಂಗ್ ಯೋಗ ಸಾಧಕರ ಮಾರ್ಗ ದರ್ಶನದಲ್ಲಿ ಮನಸ್ಸಿನ ಸ್ಥೈರ್ಯ ಮತ್ತು ಆತ್ಮಶಾಂತಿ ಕಂಡ ಅನುಭವಗಳು ಈ ಕೃತಿಯ ಆತ್ಮವಾಗಿದೆ.

-ಗೊರೂರು ಅನಂತರಾಜು, ಹಾಸನ.

ನಮ್ಮ ಭವಿಷ್ಯದ ಭೂಮಿಯ ರಕ್ಷಣೆ ನಮ್ಮ ಹೊಣೆ

ಭೂಮಿ ಬಿಸಿಯಾಗುತ್ತಿದೆ. ಜಾಗತಿಕ ತಾಪಮಾನದ ಏರಿಕೆಯ ಪರಿಣಾಮವಾಗಿ ಅತ್ಯಂತ ಹೆಚ್ಚು ಉಷ್ಣಾಂಶ ದಾಖಲಾಗುತ್ತಿದೆ. ನಿರಂತರವಾಗಿ ಹೆಚ್ಚಳವಾಗುತ್ತಿರುವ ಜನಸಂಖ್ಯೆ ಎಲ್ಲಾ ರೀತಿಯ ನೈಸರ್ಗಿಕ ಸಂಪನ್ಮೂಲಗಳನ್ನು ತನ್ನ ಬೇಡಿಕೆಗಳ ಈಡೇರಿಕೆಗಾಗಿ

ಸೌರಶಕ್ತಿ ಉತ್ಪಾದನೆ: 2ನೇ ಸ್ಥಾನಕ್ಕೆ ಜಿಗಿದ ಭಾರತ

ಜಾಗತಿಕವಾಗಿ ಅಮೆರಿಕವನ್ನು ಹಿಂದಿಕ್ಕಿ ಅತ್ಯುತ್ತಮ ಸಾಧನೆ : ಕೇಂದ್ರ ಸಚಿವ ಪ್ರಲ್ಹಾದ ಜೋಶಿ

• ಪ್ರಜೋದಯ ವರದಿ

ಹೊಸದಿಲ್ಲಿ: ಸೌರಶಕ್ತಿ ಉತ್ಪಾದನೆಯಲ್ಲಿ ಭಾರತ 2025ರಲ್ಲಿಯೇ ಅಮೇರಿಕಾವನ್ನು ಹಿಂದಿಕ್ಕಿ ವಿಶ್ವದಲ್ಲೇ ಎರಡನೇ ಸ್ಥಾನದಲ್ಲಿದೆ ಎಂದು ಕೇಂದ್ರ ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ ಜೋಶಿ ಅವರು ಹೇಳಿದ್ದಾರೆ.

ಮನೆ ಮೇಲ್ಛಾವಣಿ ಘಟಕ, ಕೃಷಿ ಪಂಪ್ ಸೌರೀಕರಣದಿಂದ ಹಿಡಿದು ಬೃಹತ್ ಸೌರ ಪಾರ್ಕ್‌ಗಳ ಸ್ಥಾಪನೆವರೆಗೂ ಭಾರತ ಮುಂಚೂಣಿಯಲ್ಲಿದ್ದು, ವಿಶ್ವದ 2ನೇ ಅತಿ ದೊಡ್ಡ ರಾಷ್ಟ್ರವಾಗಿ ಹೊರ ಹೊಮ್ಮಿದೆ ಎಂದು ಸಚಿವರು ಹೇಳಿದ್ದಾರೆ.

2025ರ ಸೌರಶಕ್ತಿ ಸಾಮರ್ಥ್ಯದಲ್ಲಿ ಭಾರತ ಎರಡನೇ ಸ್ಥಾನದಲ್ಲಿದ್ದ ಅಮೆರಿಕವನ್ನು ಮೀರಿಸಿದ್ದು, ವಾರ್ಷಿಕ ಸೇರ್ಪಡೆಯಲ್ಲಿ ಸೌರ ಶಕ್ತಿ ಮಾರುಕಟ್ಟೆಯನ್ನು ವಿಸ್ತೃತವಾಗಿಸಿದೆ. 2025ರಲ್ಲಿ ಭಾರತ 37 ಗಿಂತ ಹೆಚ್ಚಿನ ಸೌರ ಶಕ್ತಿ ಸೇರ್ಪಡೆಯನ್ನು ದಾಖಲಿಸಿದ್ದು, ಇದು ಅಮೆರಿಕದ 34 ಕ್ಕಿಂತ ಅಧಿಕ ಸಾಮರ್ಥ್ಯವನ್ನು ದಾಖಲಿಸಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಹೇಳಿದ್ದಾರೆ.

ಶುದ್ಧ ಇಂಧನ ಪರಿವರ್ತನೆಯಲ್ಲಿ ಭಾರತದ ಹೊಸ ಹೆಜ್ಜೆ

ಗುಜರಾತ್‌ನ ಪಠಾಣ್ ಜಿಲ್ಲೆಯಲ್ಲಿರುವ ಚರಂಕ ಸೌರ ಉದ್ಯಾನ ಭಾರತದ ಸೌರಶಕ್ತಿ ಬೆಳವಣಿಗೆಗೆ ಜಾಗತಿಕ ಮಾನದಂಡ ಸ್ಥಾಪಿಸುತ್ತಿದೆ. ವೇಗವಾಗಿ ಬೆಳೆಯುತ್ತಿರುವ ದೇಶದ ಸೌರಶಕ್ತಿ ಮಾರುಕಟ್ಟೆಗೆ ಪ್ರಮುಖ ಕೊಡುಗೆ ಕೊಡಮಾಡಿದೆ. ಪ್ರಧಾನಿ ನರೇಂದ್ರ ಮೋದಿ ಅವರ ದೂರದೃಷ್ಟಿ ನಾಯಕತ್ವದಲ್ಲಿ ಭಾರತ ಶುದ್ಧ ಇಂಧನ ಪರಿವರ್ತನೆಯಲ್ಲಿ ಹೊಸ ಹೆಜ್ಜೆಯಿರಿಸಿದ್ದು, ಸೌರ ಶಕ್ತಿ, ಪವನ ವಿದ್ಯುತ್, ಜೈವಿಕ ಇಂಧನ ಒಟ್ಟಾರೆ

ನವೀಕರಿಸಬಹುದಾದ ಇಂಧನ ಸಾಮರ್ಥ್ಯದ ಮೂಲಕ ದೇಶದ ಇಂಧನ ಭದ್ರತೆಯನ್ನು ಬಲಪಡಿಸುತ್ತಿದೆ. ಅಲ್ಲದೆ, ಸುಸ್ಥಿರ ಅಭಿವೃದ್ಧಿಯನ್ನು ಮುನ್ನಡೆಸುತ್ತಿದೆ ಎಂದು ಕೇಂದ್ರ ಸಚಿವರು ಹೇಳಿದ್ದಾರೆ.

ನವೀಕರಿಸಬಹುದಾದ ಇಂಧನದಲ್ಲಿ ಜಾಗತಿಕ ನಾಯಕನಾಗಿ ಭಾರತ

ನವೀಕರಿಸಬಹುದಾದ ಇಂಧನದಲ್ಲಿ ಜಾಗತಿಕ ನಾಯಕನಾಗಿ ಭಾರತದ ಸ್ಥಾನವನ್ನು ಮತ್ತಷ್ಟು ಬಲಪಡಿಸುತ್ತಿದ್ದು, ಅಂತರಾಷ್ಟ್ರೀಯ ನವೀಕರಿಸಬಹುದಾದ ಇಂಧನ ಸಂಸ್ಥೆ ವರದಿ ಪ್ರಕಾರ ಅಮೆರಿಕವನ್ನು ಹಿಂದಿಕ್ಕಿ ಜಾಗತಿಕವಾಗಿ 2 ನೇ ಸ್ಥಾನಕ್ಕೆ ತಲುಪಿದೆ ಎಂದು ತಿಳಿಸಿದ್ದಾರೆ. ಅಂತರಾಷ್ಟ್ರೀಯ ನವೀಕರಿಸಬಹುದಾದ ಇಂಧನ ಸಂಸ್ಥೆ ಡಿಸೆಂಬರ್ 2025ರಲ್ಲಿ ಬಿಡುಗಡೆ ಮಾಡಿದ ವರದಿಯಂತೆ 2025-26ರ ಆರ್ಥಿಕ ವರ್ಷದಲ್ಲಿ ಭಾರತ ಒಟ್ಟು 55.3 ಪಳೆಯುಳಿಕೆಯೇತರ ಸಾಮರ್ಥ್ಯದ ಸೇರ್ಪಡೆಯನ್ನು ಸಾಧಿಸಿದೆ ಎಂದು ಜೋಶಿ ಹೇಳಿದ್ದಾರೆ.

ವಿದ್ಯುತ್ ಬೇಡಿಕೆಯ ಶೇ.51.5 ರಷ್ಟು ನವೀಕರಿಸಬಹುದಾದ ಇಂಧನದಿಂದ ಪೂರೈಕೆ

ನವೀಕರಿಸಬಹುದಾದ ಇಂಧನ ಮೂಲಗಳು ದೇಶದ ಒಟ್ಟು ವಿದ್ಯುತ್ ಬೇಡಿಕೆಯ 203 ನಲ್ಲಿ ಶೇ.51.5ರಷ್ಟು ಪೂರೈಸುತ್ತಿದೆ ಎಂದು ಸಚಿವ ಪ್ರಲ್ಹಾದ ಜೋಶಿ ಮಾಹಿತಿ ನೀಡಿದ್ದಾರೆ.

ಇನ್ನು, ಪಾರದರ್ಶಕ, ನ್ಯಾಯಯುತ ಮತ್ತು ಗ್ರಾಹಕ ಸ್ನೇಹಿ ಡಿಜಿಟಲ್ ಮಾರುಕಟ್ಟೆ ಲಭ್ಯವಾಗುವಂತೆ ಡಿಜಿಟಲ್ ವೇದಿಕೆಗಳ ಮೇಲೆ ಕಣ್ಣಿಟ್ಟಿದ್ದು, ಸ್ಪಷ್ಟ-ಅಗತ್ಯ ಮಾಹಿತಿಯುಕ್ತ ಮತ್ತು ಕುಶಲ ವಿನ್ಯಾಸ ಅಭ್ಯಾಸಗಳಿಂದ ಮುಕ್ತವಾಗಿರಬೇಕು, ಗ್ರಾಹಕರನ್ನು ದುರ್ಬಲಗೊಳಿಸುವ ಕ್ರಮವನ್ನು ನಿಲ್ಲಿಸಬೇಕೆಂದು ಸೂಚಿಸಿದೆ ಎಂದು ಜೋಶಿ ಹೇಳಿದ್ದಾರೆ.

ಚುರುಕುಗೊಂಡ ಮುಂಗಾರು; ರಾಜ್ಯಾದ್ಯಂತ ಮಳೆ

• ಪ್ರಜೋದಯ ವರದಿ

ಬೆಂಗಳೂರು: ಕೇರಳಕ್ಕೆ ಮುಂಗಾರು ಮಳೆ ಭರ್ಜರಿಯಾಗಿ ಆಗಮಿಸಿದ್ದು, ರಾಜ್ಯದಲ್ಲಿಯೂ ನೈಋತ್ಯ ಮುಂಗಾರು ಚುರುಕುಗೊಳ್ಳುತ್ತಿದೆ. ರಾಜ್ಯದಾದ್ಯಂತ ಮಳೆಯ ಆರ್ಭಟ ಜೋರಾಗಲಿದೆ ಎಂದು ಹವಾಮಾನ ಇಲಾಖೆ ಮತ್ತು ರಾಜ್ಯ ನೈಸರ್ಗಿಕ ವಿಕೋಪ ಮೇಲ್ವಿಚಾರಣಾ ಕೇಂದ್ರ ಎಚ್ಚರಿಕೆ ನೀಡಿದೆ.

ರಾಜ್ಯದ ವಿವಿಧ ಭಾಗಗಳಲ್ಲಿ ಮುಂದಿನ ಕೆಲವು ದಿನಗಳ ಕಾಲ ಮಳೆಯ ಅಬ್ಬರ ಮುಂದುವರಿಯಲಿದ್ದು, ಜೂನ್ 9 ರವರೆಗೆ ವ್ಯಾಪಕ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಉತ್ತರ ಕರ್ನಾಟಕ, ದಕ್ಷಿಣ ಕರ್ನಾಟಕ ಹಾಗೂ ಕರಾವಳಿ ಭಾಗಗಳ ಹಲವು ಜಿಲ್ಲೆಗಳಲ್ಲಿ ಗುಡುಗು, ಮಿಂಚು ಮತ್ತು ಬಿರುಗಾಳಿಯೊಂದಿಗೆ ಮಳೆಯಾಗುವ ಸಾಧ್ಯತೆ ಇರುವುದರಿಂದ ಸಾರ್ವಜನಿಕರು ಎಚ್ಚರಿಕೆಯಿಂದಿರಲು ಸೂಚಿಸಲಾಗಿದೆ.

ರಾಜ್ಯದ ಹಲವು ಜಿಲ್ಲೆಗಳಲ್ಲಿ ಈಗಾ



ಗಲೇ ಮುಂಗಾರು ಚುರುಕುಗೊಂಡಿದ್ದು, ಮುಂದಿನ 24 ಗಂಟೆಗಳಲ್ಲಿ ಕೆಲವೆಡೆ ಭಾರೀ ಮಳೆಯಾಗುವ ಸಾಧ್ಯತೆ ಇದೆ. ಈ ಹಿನ್ನೆಲೆ ಉತ್ತರ ಮತ್ತು ಕಲ್ಯಾಣ ಕರ್ನಾಟಕ ಭಾಗದ 11 ಜಿಲ್ಲೆಗಳಿಗೆ ಹವಾಮಾನ ಇಲಾಖೆ ಆರೆಂಜ್ ಅಲರ್ಟ್ ಘೋಷಿಸಿದೆ. ಭಾರೀ ಮಳೆಯ ಜೊತೆಗೆ ಗಾಳಿ ಬೀಸುವ ಸಾಧ್ಯತೆ ಇರುವುದರಿಂದ ರೈತರು, ವಾಹನ ಸವಾರರು ಹಾಗೂ ಸಾರ್ವಜನಿಕರು ಅಗತ್ಯ ಮುನ್ನೆಚ್ಚರಿಕೆ ವಹಿಸುವಂತೆ ಸೂಚಿಸಲಾಗಿದೆ.

ಜೂನ್ 4 ರಿಂದ 12ರ ವರೆಗೆ ಕರಾವಳಿ, ಮಲೆನಾಡು ಮತ್ತು ಉತ್ತರ ಒಳನಾಡು ಜಿಲ್ಲೆಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆ ಇದೆ. ಗುಡುಗು, ಮಿಂಚು ಮತ್ತು ಗಂಟೆಗೆ 60 ಕಿ.ಮೀ ವೇಗದ ಬಿರುಗಾಳಿ ಸಹಿತ ಮಳೆಯಾಗುವ ನಿರೀಕ್ಷೆಯಿದೆ.

ನಾಳೆಯಿಂದ 9ರವರೆಗೆ ರಾಜ್ಯದಲ್ಲಿ ವ್ಯಾಪಕ ಮಳೆಯಾಗುವ ಸಾಧ್ಯತೆ ಇದೆ. **ಮಲೆನಾಡು ಪ್ರದೇಶಗಳಾದ ಕೊಡಗು, ಚಿಕ್ಕಮಗಳೂರು, ಹಾಸನ ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ಜೂನ್ 7ರಿಂದ 9ರವರೆಗೆ ಮಧ್ಯಮದಿಂದ ಭಾರೀ ಮಳೆಯಾಗುವ ಸೂಚನೆ ಇದೆ.** ಉತ್ತರ ಕರ್ನಾಟಕದ ಬೆಳಗಾವಿ, ಹಾವೇರಿ, ಬಾಗಲಕೋಟೆ, ಕೊಪ್ಪಳ, ರಾಯಚೂರು ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಜೂನ್ 5ರವರೆಗೆ ಗಂಟೆಗೆ 40-50 ಕಿ.ಮೀ ವೇಗದ ಬಲವಾದ ಗಾಳಿ ಮತ್ತು ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಇದೆ.

ಕರಾವಳಿ ಜಿಲ್ಲೆಗಳಾದ ಉಡುಪಿ, ದಕ್ಷಿಣ ಕನ್ನಡ ಮತ್ತು ಉತ್ತರ ಕನ್ನಡದಲ್ಲಿ ಮುಂಗಾರು ರೀತಿಯ ಮಳೆ ಆರಂಭವಾಗಿದೆ. ಅರಬ್ಬಿ ಸಮುದ್ರದಲ್ಲಿ ಮುಂಗಾರಿಗೆ ಪೂರಕ ವಾತಾವರಣ ನಿರ್ಮಾಣವಾಗುತ್ತಿದ್ದು, ಜೂನ್ 12ರವರೆಗೆ ಉತ್ತಮ ಮಳೆಯ ಸಾಧ್ಯತೆ ಗೋಚರಿಸುತ್ತಿದೆ.

ನೂತನ ಸಿಎಂ ಡಿ.ಕೆ.ಶಿ.ಯಿಂದ ಸಮಗ್ರ ಅಭಿವೃದ್ಧಿ

• ಪ್ರಜೋದಯ ವರದಿ

ಚನ್ನರಾಯಪಟ್ಟಣ: ರಾಜ್ಯದ 24ನೇ ಮುಖ್ಯಮಂತ್ರಿಗಳಾಗಿ ಡಿ.ಕೆ.ಶಿವಕುಮಾರ್ ಅವರು ಅಧಿಕಾರ ಸ್ವೀಕರಿಸುವ ಮೂಲಕ ರಾಜ್ಯದ ಸಮಗ್ರ ಅಭಿವೃದ್ಧಿಗೆ ಶ್ರಮಿಸಲಿದ್ದಾರೆ ಎಂದು ತಾಲ್ಲೂಕು ಗ್ಯಾರಂಟಿ ಯೋಜನಾ ಸಮಿತಿ ಅಧ್ಯಕ್ಷ ಎಲ್.ಪಿ.ಪ್ರಕಾಶ್ ಗೌಡ ಅವರು ತಿಳಿಸಿದರು.

ಇಲ್ಲಿನ ವಕೀಲರ ಸಂಘದಲ್ಲಿ ತಾಲೂಕು ಗ್ಯಾರಂಟಿ ಯೋಜನಾ ಸಮಿತಿ ಅಧ್ಯಕ್ಷ ಹಾಗೂ ವಕೀಲ ಎಲ್.ಪಿ. ಪ್ರಕಾಶ್‌ಗೌಡ ಅವರು ಡಿ.ಕೆ.ಶಿವಕುಮಾರ್ ಅವರು ಮುಖ್ಯಮಂತ್ರಿಗಳಾಗಿ ಪ್ರಮಾಣವಚನ ಸ್ವೀಕರಿಸಿದ ಹಿನ್ನೆಲೆ ತಮ್ಮ ವಕೀಲ ಮಿತ್ರರಿಗೆ ಗುರುವಾರ ಸಿಹಿ ಹಂಚಿ ಸಂಭ್ರಮಾಚರಣೆ ಆಚರಿಸಿದರು. ನಂತರ ಮಾತನಾಡಿ, ಕಾಂಗ್ರೆಸ್ ಪಕ್ಷದ ಶಿಸ್ತಿನ ಸಿಪಾಯಿಗಳಾಗಿ ವಿದ್ಯಾರ್ಥಿ ದೆಸೆ

ಗ್ಯಾರಂಟಿ ಯೋಜನಾ ಸಮಿತಿ ಅಧ್ಯಕ್ಷ ಪ್ರಕಾಶ್‌ಗೌಡ



ಯಿಂದಲೂ ಪಕ್ಷದ ಸಂಘಟನೆಗೆ ಅನೇಕ ದಶಕಗಳಿಂದ ಹೆಚ್ಚಿನ ಒತ್ತು ನೀಡುತ್ತಾ ಬಂದಿದ್ದು, ಅನೇಕ ಬಾರಿ ಶಾಸಕರಾಗಿ ಪಕ್ಷದ ಅಧ್ಯಕ್ಷರಾಗಿ ಸೇವೆ ಸಲ್ಲಿಸಿರುವ ಅವರು 2013ರ ವಿಧಾನ ಸಭಾ ಚುನಾವಣೆಯಲ್ಲಿ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ನವರ ಜೊತೆಯಾಗಿ ಪಕ್ಷವನ್ನು ಅಧಿಕಾರಕ್ಕೆ ತರುವಲ್ಲಿ ಯಶಸ್ವಿಯಾಗಿದ್ದರು ಎಂದು ಹೇಳಿದರು.

ಡಿಕೆಶಿ ಅವರ ಪಕ್ಷ ನಿಷ್ಠೆ ಅಭಿವೃದ್ಧಿಯ ಚಿಂತನೆಗೆ ಅನುಗುಣವಾಗಿ ಪಕ್ಷ ಮುಖ್ಯಮಂತ್ರಿ ಹುದ್ದೆ ನೀಡಿದೆ. ಅವರ ನೇತೃತ್ವದ ರಾಜ್ಯ ಸರ್ಕಾರ ರಾಜ್ಯದ ಮತದಾರರಿಗೆ ಕೊಟ್ಟ ಮಾತಿನಂತೆ ರಾಜ್ಯದ ಸಮಗ್ರ ಅಭಿವೃದ್ಧಿಗೆ ಶ್ರಮಿಸಲಿದೆ. ಮಾಜಿ ಮುಖ್ಯಮಂತ್ರಿ, ಒಕ್ಕಲಿಗರ ನಾಯಕ ಎಸ್.ಎಂ. ಕೃಷ್ಣ ಅವರ ನಂತರ ಮತ್ತೊಬ್ಬ ಒಕ್ಕಲಿಗ ನಾಯಕರಾದ ಡಿ.ಕೆ.ಶಿವಕುಮಾರ್ ಅವರು ಮುಖ್ಯಮಂತ್ರಿ ಸ್ಥಾನ ಅಲಂಕರಿಸಿದ್ದಾರೆ. ಕಾಂಗ್ರೆಸ್ ಪಕ್ಷ ಎಲ್ಲಾ ವರ್ಗದ ಜನರಿಗೆ ಸಾಮೂಹಿಕ ನಾಯಕತ್ವದಲ್ಲಿ ಅಧಿಕಾರ ಹಂಚಿಕೆ ಮಾಡುವ ಮೂಲಕ ಎಲ್ಲರಿಗೂ ನ್ಯಾಯ ಒದಗಿಸಿದೆ ಎಂದು ಹೇಳಿದರು.

ಗ್ಯಾರಂಟಿ ಯೋಜನೆಗಳು ಎಂದಿನಂತೆ ಮುಂದುವರೆಯಲಿದ್ದು, ಫಲಾನುಭವಿಗಳಿಗೆ ಸೌಲಭ್ಯ ಮುಂದುವರಿಯಲಿದೆ ಎಂದರು.

ಈ ವೇಳೆ ಹಿರಿಯ ವಕೀಲ ಸಿ.ಎಸ್. ದೇವರಾಜೇಗೌಡ, ವಕೀಲರ ಸಂಘದ ಅಧ್ಯಕ್ಷ ಡಿ.ಕೆ. ಹರೀಶ್, ಉಪಾಧ್ಯಕ್ಷ ದಿನೇಶ್, ಕಾರ್ಯದರ್ಶಿ ಸಿಬಿ ಹೇಮಂತ್‌ಕುಮಾರ್, ಖಜಾಂಚಿ ಚೇತನ್‌ಕುಮಾರ್, ಮಹಿಳಾ ಜಂಟಿ ಕಾರ್ಯದರ್ಶಿ ಸುಷ್ಮಾ ಜೈಪಾಲ್, ರಂಗಶೆಟ್ಟಿ, ಎಂಎನ್ ಬೋರೇಗೌಡ, ಟಿ.ಎಸ್.ಪ್ರಕಾಶ್ ಇನ್ನಿತರರಿದ್ದರು.

ಸ್ವಚ್ಛತೆಗೆ ಸಹಕರಿಸದಿದ್ದರೆ ದಂಡ ವಿಧಿಸುವುದು ಖಚಿತ

• ಪ್ರಜೋದಯ ವರದಿ

ಆಲೂರು: ಸಾರ್ವಜನಿಕರು, ಉದ್ದಿಮೆದಾರರು ಸ್ವಚ್ಛತೆಗೆ ಸಹಕರಿಸದಿದ್ದರೆ, ದಂಡದ ಜೊತೆಗೆ ಸೌಲಭ್ಯಗಳ ಕೊರತೆ ಎದುರಿಸಬೇಕಾಗುತ್ತದೆ ಎಂದು ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಮಂಜುನಾಥ್ ಎಚ್ಚರಿಸಿದ್ದಾರೆ.

ಪಟ್ಟಣ ಪಂಚಾಯಿತಿ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ಕಲ್ಯಾಣ ಮಂಟಪ, ಬಾರ್, ಹೋಟೆಲ್, ಬ್ರೆಡ್ ಅಂಗಡಿ ಉದ್ದಿಮೆ ಮಾಲೀಕರ ಸಭೆ ಉದ್ದೇಶಿಸಿ ಮಾತನಾಡಿ, ಸರ್ವೋಚ್ಚ ನ್ಯಾಯಾಲಯದ ನಿರ್ದೇಶನದಂತೆ ಹೊಸ ಘನತ್ಯಾಜ್ಯ ನಿಯಮಗಳನ್ನು ರೂಪಿಸಲಾಗಿದೆ. ಪ್ರತಿಯೊಬ್ಬರೂ ತಮ್ಮ ಉದ್ದಿಮೆಗಳಲ್ಲಿ ಸಂಗ್ರಹವಾಗುವ ಕಸವನ್ನು ಹಸಿ ತ್ಯಾಜ್ಯ, ಒಣ ತ್ಯಾಜ್ಯ, ಸ್ಯಾನಿಟರಿ ತ್ಯಾಜ್ಯ ಮತ್ತು ವಿಶೇಷ ಕಾಳಜಿ ತ್ಯಾಜ್ಯವೆಂದು ವಿಂಗಡಿಸಿ ಬೇರ್ಪಡಿಸಿ

ಪ.ಪಂ. ಮುಖ್ಯಾಧಿಕಾರಿ ಮಂಜುನಾಥ್ ಎಚ್ಚರಿಕೆ

ಕಸದ ವಾಹನಗಳಿಗೆ ನೀಡಬೇಕು. ಬೇರ್ಪಡಿಸದೆ ನೀಡುವ ಕಸವನ್ನು ಸ್ವೀಕರಿಸಲಾಗುವುದಿಲ್ಲ.

ಈಗಾಗಲೆ ತರಕಾರಿ ಅಂಗಡಿ, ಶಾಲೆಗಳಿಗೆ ಕಸ ಸಂಗ್ರಹ ಡಬ್ಬಿಗಳನ್ನು ನೀಡಲಾಗಿದೆ. ತ್ಯಾಜ್ಯವನ್ನು ಎಲ್ಲೆಂದರಲ್ಲಿ ಬಿಸಾಡಿದ ಮತ್ತು ನಿಯಮ ಉಲ್ಲಂಗಿಸಿದ ವ್ಯಕ್ತಿ/ಕುಟುಂಬದ ವಿವರವನ್ನು ತಾಂತ್ರೀಕರಣದಲ್ಲಿ ಅಪಲೋಡ್ ಮಾಡಲಾಗುವುದು. ಆಗ ದಂಡ ಪಾವತಿಗೆ ತಯಾರಾಗಿರಬೇಕು. ಪ್ರತಿಯೊಂದು ವಿಭಾಗದಲ್ಲಿ ತಾಂತ್ರೀಕರಣ ಹೊಂದಿಕೊಂಡಿರುವುದರಿಂದ ಸ್ವಚ್ಛತೆಗೆ ಎಲ್ಲರೂ ಸಹಕರಿಸಬೇಕು.

ನಿಯಮಗಳನ್ನು ಉಲ್ಲಂಗಿಸಿದರೆ ಪ್ರಥಮ ಹಂತದಲ್ಲಿ ತಿಳುವಳಿಕೆ ನೋಟೀಸ್ ನೀಡಲಾಗುತ್ತದೆ. 2ನೆ ಹಂತದಲ್ಲಿ ಉದ್ದಿಮೆಗೆ ನೀರು ಸರಬರಾಜು ನಿಲ್ಲಿಸಲಾಗುವುದು, ಮೂರನೆ ಹಂತದಲ್ಲಿ ವಿದ್ಯುತ್ ಸೌಲಭ್ಯ ನಿಲ್ಲಿಸಲಾಗುವುದು. ಮರು ಸೌಲಭ್ಯ ಪಡೆಯುವ ಸಂದರ್ಭದಲ್ಲಿ ತಾಂದಂಡವನ್ನು ಕಡ್ಡಾಯವಾಗಿ ಪಾವತಿ ಮಾಡಬೇಕಾಗುತ್ತದೆ.

ಪ್ರತಿಯೊಂದು ಅಂಗಡಿ, ಉದ್ದಿಮೆಗಳನ್ನು ಈಗಾಗಲೆ ತಾಂತ್ರೀಕರಣದ ಮೂಲಕ ನೊಂದಣಿ ಮಾಡಲಾಗಿದೆ. ಪ್ರತಿ ದಿನದ ಚಟುವಟಿಕೆಯನ್ನು ಇದರಲ್ಲಿ ನೊಂದಾವಣಿ ಮಾಡಲಾಗುವುದು. ಉದ್ದಿಮೆ ಮಾಲೀಕರು ತಮ್ಮ ಉದ್ದಿಮೆ ವ್ಯಾಪ್ತಿ ಪರಿಸರದ ಸ್ವಚ್ಛತೆ ಕಾಪಾಡುವುದು ತಮ್ಮ ಕರ್ತವ್ಯವಾಗಬೇಕು. ಪಟ್ಟಣ ಪಂಚಾಯಿತಿ ಸುಂದರವಾಗಿಡಲು ಪ್ರತಿಯೊಬ್ಬರೂ ಸ್ವಚ್ಛತೆಗೆ ಆದ್ಯತೆ ನೀಡಬೇಕು ಎಂದು ಅವರು ಮನವಿ ಮಾಡಿದರು.

ಜೂ.20 ರಿಂದ ಎಸ್‌ಐಆರ್ ಪ್ರಕ್ರಿಯೆ: ಸಹಕರಿಸಲು ಮನವಿ

• ಪ್ರಜೋದಯ ವರದಿ

ಅರಕಲಗೂಡು: ತಾಲ್ಲೂಕಿನಲ್ಲಿ ಚುನಾವಣಾ ಆಯೋಗದ ವತಿಯಿಂದ ಸಮಗ್ರ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ ಕಾರ್ಯ ಜೂನ್ 20 ರಿಂದ ಜುಲೈ 20 ರವರೆಗೆ ಒಂದು ತಿಂಗಳ ಕಾಲ ನಡೆಯುತ್ತಿದ್ದು, ಸಾರ್ವಜನಿಕರು ಈ ಪ್ರಕ್ರಿಯೆಯಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಸಹಕರಿಸುವಂತೆ ತಹಶೀಲ್ದಾರ್ ಕೆ.ಸಿ.ಸೌಮ್ಯ ಅವರು ಮನವಿ ಮಾಡಿದರು.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಕುರಿತು ತಾಲ್ಲೂಕಿನಾದ್ಯಂತ ಎಲ್ಲ ಜನರಿಗೂ ಅರಿವು ಮೂಡಿಸುವ ಕಾರ್ಯ ವ್ಯಾಪಕವಾಗಿ ನಡೆಸಲಾಗುತ್ತಿದೆ. ಮತದಾರರು ವೋಟರ್ ಹೆಲ್ಪ್‌ಲೈನ್ ಮತ್ತು ಇಸಿಐ ನೆಟ್ ಆ್ಯಪ್‌ಗಳನ್ನು ಮೊಬೈಲ್‌ನಲ್ಲಿ ಡೌನ್ಲೋಡ್ ಮಾಡಿಕೊಳ್ಳುವ ಮೂಲಕ ತಮ್ಮ ಬೂತ್ ಮತ್ತು ವಿಧಾನಸಭಾ ಕ್ಷೇತ್ರದ ನಿಖರ ಮಾಹಿತಿಯನ್ನು ಸುಲಭವಾಗಿ ವೀಕ್ಷಿಸಬಹುದು. ಹೆಚ್ಚಿನ ಸಂಖ್ಯೆಯಲ್ಲಿ ಜನರು ಈ ಪ್ರಕ್ರಿಯೆಯಲ್ಲಿ ಭಾಗವಹಿಸಿ, ತಮ್ಮ ನೋಂದಣಿಯನ್ನು ಖಾತ್ರಿಪಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಮತದಾರರ ಪಟ್ಟಿ ಪರಿಷ್ಕರಣೆಗಾಗಿ ಬೂತ್ ಮಟ್ಟದ ಅಧಿಕಾರಿಗಳು ಮನೆ, ಮನೆಗೆ ಭೇಟಿ ನೀಡಲಿದ್ದು, ಆ ಸಂದರ್ಭದಲ್ಲಿ ಸಾರ್ವಜನಿಕರು ಅಗತ್ಯ ಮಾಹಿತಿ ಹಾಗೂ ದಾಖಲಾತಿಗಳನ್ನು ನೀಡಿ ಸ್ಪಂದಿಸಬೇಕು. ಅಧಿಕಾರಿಗಳು ತರುವ ಅರ್ಜಿಯಲ್ಲಿ ಇತ್ತೀಚಿನ ಭಾವಚಿತ್ರವನ್ನು ಲಗತ್ತಿಸಿ, ನಿಖರ ವಿವರಗಳನ್ನು ಭರ್ತಿ ಮಾಡಲು ಸಹಕರಿಸಬೇಕು. ಮನೆಗೆ ಬೀಗ ಹಾಕಿದ್ದರೆ ಅಥವಾ ಬೇರೆ ಕಡೆಗೆ ಸ್ಥಳಾಂತರಗೊಂಡಿದ್ದರೆ ಬಿಎಲ್‌ಒಗಳು

ಕನಿಷ್ಠ ಮೂರು ಬಾರಿ ಭೇಟಿ ನೀಡಲಿದ್ದಾರೆ. ಮೂರು ಭೇಟಿಯ ನಂತರವೂ ವ್ಯಕ್ತಿಗಳು ಲಭ್ಯವಾಗದಿದ್ದರೆ ಚುನಾವಣಾ ಆಯೋಗದಿಂದ ನೋಟಿಸ್ ಜಾರಿ ಮಾಡಲಾಗುತ್ತದೆ. ಆ ಬಳಿಕ ಪಟ್ಟಿಯಲ್ಲಿ ಅವರ ಹೆಸರನ್ನು ಉಳಿಸಬೇಕೇ ಅಥವಾ ಕೈಬಿಡಬೇಕೇ ಎಂಬುದನ್ನು ನಿರ್ಧರಿಸಲಾಗುತ್ತದೆ. ನಿಯಮಗಳ ಪ್ರಕಾರ, ಒಬ್ಬ ಮತದಾರನ ಹೆಸರು ಕೇವಲ ಒಂದು ಬೂತ್ನಲ್ಲಿ ಮಾತ್ರ ಇರಲು ಅವಕಾಶ ವಿರುತ್ತದೆ ಎಂದು ಹೇಳಿದರು.

ಗ್ರಾಮೀಣ ಭಾಗದ ಜನರ ಅನುಕೂಲಕ್ಕಾಗಿ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲೂ ಮತದಾರರ ಸೌಲಭ್ಯ ಕೇಂದ್ರಗಳನ್ನು ತೆರೆಯಲಾಗಿದ್ದು, ನಿಗದಿತ ಸಮಯದಲ್ಲಿ ಜನರು ಭೇಟಿ ನೀಡಬಹುದಾಗಿದೆ. ಈ ಕಾರ್ಯಕ್ರಮದ ಯಶಸ್ಸಿಗಾಗಿ ಬಿಎಲ್‌ಒಗಳಿಗೆ ಈಗಾಗಲೇ ತರಬೇತಿ ನೀಡಲಾಗುತ್ತಿದ್ದು, ದೊಡ್ಡಮಗ್ಗೆ, ಕಸಬಾ, ರಾಮನಾಥಪುರ ಮತ್ತು ಕೊಣನೂರು ಹೋಬಳಿಗಳಲ್ಲಿ ತರಬೇತಿ ಕಾರ್ಯ ಮುಗಿದಿದೆ. ಮಲ್ಲಿ ಪಟ್ಟಣ ಹೋಬಳಿಯಲ್ಲಿ ತರಬೇತಿ ಕಾರ್ಯ ನಡೆಯಬೇಕಿದೆ ಎಂದು ಮಾಹಿತಿ ನೀಡಿದರು.

ಪರಿಷ್ಕರಣೆ ಕಾರ್ಯದಲ್ಲಿ 283 ಬಿಎಲ್ ಒಗಳು 39 ಮಂದಿ ಸೂಪರ್ ವೈಸರ್‌ಗಳು ಕಾರ್ಯ ನಿರ್ವಹಿಸಲಿದ್ದು ತಾಪಂ ಇಒ ನೊಡಲ್ ಅಧಿಕಾರಿಯಾಗ

6 ರಾಜ್ಯಗಳಿಗೆ ಅಭ್ಯರ್ಥಿಗಳ ಪಟ್ಟಿ ಪ್ರಕಟಿಸಿದ ಬಿಜೆಪಿ

• ಪ್ರಜೋದಯ ವರದಿ

ನವದೆಹಲಿ: ವಿವಿಧ ರಾಜ್ಯಗಳ ರಾಜ್ಯ ಸಭಾ ದ್ವೈವಾರ್ಷಿಕ ಚುನಾವಣೆ ಮತ್ತು ಒಡಿಶಾದ ರಾಜ್ಯಸಭಾ ಉಪ ಚುನಾವಣೆಗೆ ಬಿಜೆಪಿ ತನ್ನ ಅಭ್ಯರ್ಥಿಗಳ ಪಟ್ಟಿಯನ್ನು ಇಂದು (ಗುರುವಾರ) ಪ್ರಕಟಿಸಿದೆ. ಅರುಣಾಚಲ ಪ್ರದೇಶದಿಂದ ತಾಯ್ ತಾಗಾಕ್ ಅವರನ್ನು ಮಣಿಪುರದಿಂದ ಎ.ಶಾರದಾ ದೇವಿ ಅವರನ್ನು ಅಭ್ಯರ್ಥಿಗಳನ್ನಾಗಿ ಘೋಷಿಸಿದೆ.

ಗುಜರಾತ್‌ನಲ್ಲಿ ಪಕ್ಷವು ನಾಲ್ವರು ಅಭ್ಯರ್ಥಿಗಳನ್ನು ಕಣಕ್ಕಿಳಿಸಿದ್ದು, ಅವರಲ್ಲಿ ರಾಜುಭಾಯಿ ಶುಕ್ಲಾ, ಮುಕೇಶ್ ಭಾಯಿ ರಾಠ್ವಾ, ಮಾನ್‌ಸಿಂಗ್ ಪರ್ಮಾರ್ ಮತ್ತು ಜಿತೇಂದ್ರ ಮೇಘಜೀ ಭಾಯಿ ಕಂಜಾರಿಯಾ ಸೇರಿದ್ದಾರೆ. ರಾಜಸ್ಥಾನದಿಂದ ಡಾ. ಅಲ್ಕಾ ಗುರ್ಜರ್ ಮತ್ತು ರಾಜ್ಯ ಬಿಜೆಪಿ ಮಾಜಿ ಅಧ್ಯಕ್ಷ ಡಾ.ಸತೀಶ್ ಪೂನಿಯಾ ಅವರಿಗೆ ಟಿಕೆಟ್ ನೀಡಲಾಗಿದೆ. ಇನ್ನು ಒಡಿಶಾದ ರಾಜ್ಯಸಭಾ ಉಪಚುನಾವಣೆಗೆ ಪಕ್ಷವು ದೇಬಾ ಶೀಶ್ ಸಾಮಂತ ರಾಯ್ ಅವರನ್ನು ಅಭ್ಯರ್ಥಿಯನ್ನಾಗಿ ಘೋಷಿಸಿದೆ.

ಮಲ್ಲಿಕಾರ್ಜುನ ಖರ್ಗೆ ಇಂದು ನಾಮಪತ್ರ ಸಲ್ಲಿಕೆ

ಬೆಂಗಳೂರು: ಕರ್ನಾಟಕದಿಂದ ರಾಜ್ಯ ಸಭೆಗೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಸ್ಪರ್ಧಿಸಲಿದ್ದಾರೆ. ಶುಕ್ರವಾರ ಅವರು ನಾಮಪತ್ರ ಸಲ್ಲಿಸಲಿದ್ದಾರೆಂದು ಕಾಂಗ್ರೆಸ್ ಮೂಲಗಳು ತಿಳಿಸಿವೆ.

ಆರೋಗ್ಯ ಸೇವೆ ಲೋಪವಾಗದಂತೆ ಕರ್ತವ್ಯ ನಿರ್ವಹಿಸಿ

ಪ್ರಗತಿ ಪರಿಶೀಲನಾ ಸಭೆಯಲ್ಲಿ ಸಂಸದ ಶ್ರೇಯಸ್ ಪಟೇಲ್ ಸೂಚನೆ

• ಪ್ರಜೋದಯ ವರದಿ

ಹಾಸನ: ಜಿಲ್ಲೆಯ ಜನತೆಗೆ ಸಮಯೋಚಿತ ಮತ್ತು ಗುಣಮಟ್ಟದ ಆರೋಗ್ಯ ಸೇವೆ ಒದಗಿಸುವುದು ಸರ್ಕಾರದ ಪ್ರಮುಖ ಆದ್ಯತೆಯಾಗಿದೆ. ಆರೋಗ್ಯ ಸೇವೆಗಳ ಒದಗಿಸುವಲ್ಲಿ ಯಾವುದೇ ರೀತಿಯ ಲೋಪ'ಗಳು ಕಂಡುಬರದಂತೆ ಅಧಿಕಾರಿಗಳು ಹೆಚ್ಚಿನ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕೆಂದು ಸಂಸದ ಶ್ರೇಯಸ್ ಪಟೇಲ್ ಅವರು ಡಿ.ಕೆ. ಶಿವಕುಮಾರ್ ಅವರು ಸೂಚಿಸಿದರು.

ನಗರದ ಜಿಲ್ಲಾ ಆರೋಗ್ಯಾಧಿಕಾರಿ ಕಚೇರಿಯಲ್ಲಿ ಆರೋಗ್ಯ ಇಲಾಖೆಯ ವಿವಿಧ ಯೋಜನೆಗಳು, ಕಾರ್ಯಕ್ರಮಗಳು ಹಾಗು ಸಾರ್ವಜನಿಕರಿಗೆ ನೀಡುತ್ತಿರುವ ಆರೋಗ್ಯ ಸೇವೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಗ್ರಾಮೀಣ ಹಾಗು ನಗರ ಪ್ರದೇಶಗಳಲ್ಲಿನ ಸಾರ್ವಜನಿಕರಿಗೆ ಆರೋಗ್ಯ ಸೇವೆಗಳು ಸುಲಭವಾಗಿ ತಲುಪುವಂತೆ ಕ್ರಮ ಕೈಗೊಳ್ಳಬೇಕೆಂದು ತಿಳಿಸಿದರು.

ಗರ್ಭಿಣಿಯರು, ಮಕ್ಕಳು, ಹಿರಿಯ ನಾಗರಿಕರು ಹಾಗು ಬಡವರ್ಗದ ಜನರಿಗೆ ಅಗತ್ಯ ಆರೋಗ್ಯ ಸೌಲಭ್ಯಗಳನ್ನು ಪರಿಣಾಮಕಾರಿಯಾಗಿ ಒದಗಿಸಬೇಕು. ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರು, ನರ್ಸಿಂಗ್ ಸಿಬ್ಬಂದಿ ಹಾಗು ಅಗತ್ಯ ಔಷಧಿಗಳ ಲಭ್ಯತೆಯನ್ನು ಖಚಿತಪಡಿಸಿಕೊಳ್ಳುವ ಜೊತೆಗೆ ಆಸ್ಪತ್ರೆಗಳ ಸ್ವಚ್ಛತೆ, ಮೂಲ ಸೌಕರ್ಯ ಅಭಿವೃದ್ಧಿ ಮತ್ತು ರೋಗಿಗಳ ಸ್ನೇಹಿ ವಾತಾ ವರಣ ನಿರ್ಮಾಣಕ್ಕೆ ಆದ್ಯತೆ ನೀಡುವಂತೆ ನಿರ್ದೇಶನ ನೀಡಿದರು.

ಮಳೆಗಾಲದ ಹಿನ್ನಲೆ ಡೆಂಗ್ಯೂ, ಮಲೇರಿಯಾ ಸೇರಿ ಸಾಂಕ್ರಾಮಿಕ ರೋಗಗಳ ನಿಯಂತ್ರಣಕ್ಕೆ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳಬೇಕು. ಸಾರ್ವಜನಿಕರಲ್ಲಿ ಆರೋಗ್ಯ ಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ರೋಗಗಳ ಹರಡುವಿಕೆಯನ್ನು ತಡೆಯಲು ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ತಿಳಿಸಿದರು.

ಸಭೆಯಲ್ಲಿ ಹಲವು ವಿಷಯ ಚರ್ಚೆ

ಸಭೆಯಲ್ಲಿ ಜಿಲ್ಲೆಯ ಸರ್ಕಾರಿ ಆಸ್ಪತ್ರೆಗಳು, ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಸಮುದಾಯ ಆರೋಗ್ಯ ಕೇಂದ್ರಗಳು ಹಾಗು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವಿವಿಧ ಯೋಜನೆಗಳ ಅನುಷ್ಠಾನದ ಕುರಿತು ಅಧಿಕಾರಿ ಗಳಿಂದ ಮಾಹಿತಿ ಪಡೆದು ಪರಿಶೀಲಿ ಸಲಾಯಿತು. ತಾಯಿ ಮತ್ತು ಶಿಶು ಆರೋಗ್ಯ, ಲಸಿಕಾ ಕಾರ್ಯಕ್ರಮ, ಸಾಂಕ್ರಾಮಿಕ ಹಾಗು ಅಸಾಂಕ್ರಾಮಿಕ ರೋಗಗಳ ನಿಯಂತ್ರಣ, ತುರ್ತು ವೈದ್ಯಕೀಯ ಸೇವೆಗಳು, ವೈದ್ಯರು ಹಾಗು ಸಿಬ್ಬಂದಿ ಭ್ಯತೆ ಕುರಿತು ಚರ್ಚೆ ನಡೆಯಿತು.

ಆರೋಗ್ಯ ಇಲಾಖೆಯ ವಿವಿಧ ಯೋಜನೆಗಳ ಅನುಷ್ಠಾನ ಪ್ರಗತಿ, ಲಭ್ಯವಿರುವ ಸೌಲಭ್ಯಗಳು ಹಾಗು ಎದುರಾಗಿರುವ ಸವಾಲುಗಳ ಕುರಿತು ಅಧಿಕಾರಿಗಳೊಂದಿಗೆ ಸಮಗ್ರ ಚರ್ಚೆ ನಡೆಸಿ, ಸೇವಾ ಗುಣಮಟ್ಟವನ್ನು

> **ಆರೋಗ್ಯಕರ ಹಾಸನ ಜಿಲ್ಲೆಯ ನಿರ್ಮಾಣ ನಮ್ಮ ಗುರಿಯಾಗಿದೆ. ಜಿಲ್ಲೆಯ ಪ್ರತಿಯೊಬ್ಬ ನಾಗರಿಕರಿಗೂ ಗುಣಮಟ್ಟದ ಹಾಗು ಸುಲಭವಾಗಿ ಲಭ್ಯವಾಗುವ ಆರೋಗ್ಯ ಸೇವೆಗಳನ್ನು ಒದಗಿಸಲು ಎಲ್ಲಾ ಇಲಾಖೆಗಳ ಸಮನ್ವಯದೊಂದಿಗೆ ಕಾರ್ಯನಿರ್ವಹಿಸಲು ಬದ್ಧರಾಗಿದ್ದೇವೆ.**
> **-ಶ್ರೇಯಸ್ ಪಟೇಲ್, ಸಂಸದ**

ಮತ್ತಷ್ಟು ಹೆಚ್ಚಿಸಲು ಅಗತ್ಯ ಮಾರ್ಗದರ್ಶನ ಮತ್ತು ಸೂಚನೆಗಳನ್ನು ನೀಡಲಾಯಿತು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಅನಿಲ್, ಹಿಮ್ಸ್ ನಿರ್ದೇಶಕ ಡಾ.ರಾಜಣ್ಣ ಸೇರಿ ಹಲವರು ಹಾಜರಿದ್ದರು.

ಜನಪ್ರಿಯ ಆಸ್ಪತ್ರೆಯಲ್ಲಿ ಕಾರ್ಡಿಯಾಕ್ ಕೇರ್ ಪ್ರಾರಂಭ

• ಪ್ರಜೋದಯ ವರದಿ

ಹಾಸನ: ನಗರದ ಜನಪ್ರಿಯ ಆಸ್ಪತ್ರೆಯಲ್ಲಿ ಪ್ರಾರಂಭವಾಗಿರುವ ಕಾರ್ಡಿಯಾಕ್ ಕೇರ್ ಘಟಕಕ್ಕೆ ಗುರುವಾರ ಸಂಸದ ಶ್ರೇಯಸ್ ಪಟೇಲ್ ಅವರು ಸಾರ್ವಜನಿಕ ಸೇವೆಗೆ ಲೋಕಾರ್ಪಣೆಗೊಳಿಸಿದರು.

ಆಸ್ಪತ್ರೆಯ ಅಧ್ಯಕ್ಷ ಡಾ||ಅಬ್ದುಲ್ ಬಶೀರ್ ಅವರು ಮಾತನಾಡಿ, ನಗರದಲ್ಲಿಯೇ ಕಡಿಮೆ ದರದಲ್ಲಿ ಆಂಜಿಯೋಗ್ರಾಂ ಮತ್ತು ಆಂಜಿಯೋಪ್ಲಾಸ್ಟಿ ಮೇಲೆ ವಿಶೇಷ ಕೊಡುಗೆಗಳು ನಮ್ಮ ಆಸ್ಪತ್ರೆಯಲ್ಲಿವೆ. ಕಾರ್ಡಿಯಾಕ್ ಕೇರ್ ಘಟಕ ಉದ್ಘಾಟನೆ ನಿಮಿತ್ತ ಜೂ.4 ರಿಂದ 30 ರ ವರೆಗೆ ಉಚಿತ ಹೃದಯ ತಜ್ಞರ ಸಲಹೆ, ಟಿಎಂಟಿ (ಟ್ರೆಡ್ ಮಿಲ್ ಪರೀಕ್ಷೆ) 2ಡಿ ಎಕೋ (ಹೃದಯ ಸ್ಕ್ಯಾನ್), ಇಸಿಜಿ ಪರೀಕ್ಷೆಗೆ ತಗಲುವ ವೆಚ್ಚ ಒಟ್ಟು 4500 ರೂ., ಸಾರ್ವಜನಿಕರಿಗೆ ಸದುಪಯೋಗವಾಗಲಿ ಎಂದು ರಿಯಾಯಿತಿ ನೀಡಿ 1500 ರೂ.ದರ ನಿಗದಿಪಡಿಸಲಾಗಿದೆ. ಸಾರ್ವಜನಿಕರು ಈ ಕೊಡುಗೆಯ ಸದುಪಯೋಗ ಪಡಿಸಿಕೊಳ್ಳಬೇಕೆಂದು ಕೋರಿದರು.

ನಮ್ಮ ಆಸ್ಪತ್ರೆಯಲ್ಲಿ ನಗದು ರಹಿತ ಚಿಕಿತ್ಸಾ ಸೌಲಭ್ಯಗಳು ಲಭ್ಯ, ಸರ್ಕಾರದ ಸೌಲಭ್ಯಗಳಾದ ಎಬಿಆರ್‌ಕೆ, ಆಯುಷ್ಮಾನ್, ಬಿಪಿಎಲ್, ಯಶಸ್ವಿನಿ ಯೋಜನೆ, ಇಎಸ್‌ಐ, ಕರ್ನಾಟಕ ಆರೋಗ್ಯ, ಸಂಜೀವಿನಿ ಯೋಜನೆ (ಕೆಎಸ್‌ಎಸ್), ಎಸ್‌ಕೆಡಿಆರ್‌ಡಿಪಿ, ಆರೋಗ್ಯ ಭಾಗ್ಯ ಯೋಜನೆ, ಕೆಎಸ್‌ಆರ್‌ಟಿಸಿ, ಇಸಿಎಚ್‌ಎಸ್ ಎಂಸಿಎಫ್ ಎಲ್ಲಾ ಖಾಸಗಿ ಆರೋಗ್ಯ ವಿಮಾ ಯೋಜನೆಗಳ ಸೌಲಭ್ಯವಿದೆ ಎಂದು ವಿವರಿಸಿದರು.

ಇತ್ತೀಚಿನ ದಿನಗಳಲ್ಲಿ ಜಿಲ್ಲೆಯಲ್ಲಿ ಹೃದಯಾಘಾತದಿಂದ ಸಾವನ್ನಪ್ಪುತ್ತಿರುವುದಕ್ಕೆ ಯಾರೂ ಆತಂಕ ಪಡುವ ಅಗತ್ಯವಿಲ್ಲ. ಎಲ್ಲಾ ಸಾವುಗಳು ಹೃದಯಾಘಾತದಿಂದ ಸಂಭವಿಸಿವೆ ಎನ್ನುವುದಕ್ಕೆ ಪುರಾವೆ ಇಲ್ಲ. ಆದರೆ, ನಾವೆಲ್ಲರೂ ಜಾಗೃತರಾಗಿದ್ದು ಮುಂಜಾಗ್ರತವಾಗಿ ಹೃದಯ ಸಂಬಂಧ ಪರೀಕ್ಷೆಗಳನ್ನು ಮಾಡಿಸಿಕೊಳ್ಳೋಣವೆಂದರು.

ಹೃದಯಾಘಾತಕ್ಕೆ ಹಲವು ಕಾರಣಗಳಿದ್ದು, ಅದನ್ನು ತಡೆಗಟ್ಟಲು ಜೀವನ ಶೈಲಿ ಬದಲಾಯಿಸಿಕೊಂಡು, ಆರೋಗ್ಯಕರ ಅಭ್ಯಾಸಗಳನ್ನು ಅಳವಡಿಸಿಕೊಳ್ಳಬೇಕು. ಕ್ರಮಬದ್ಧವಾದ ವ್ಯಾಯಾಮ, ಸಮತೋಲಿತ ಆಹಾರ, ಧೂಮಪಾನ ಮತ್ತು ಮದ್ಯಪಾನ ತ್ಯಜಿಸುವುದು, ಒತ್ತಡ ನಿರ್ವಹಣೆ ಮತ್ತು ನಿಯಮಿತ ಆರೋಗ್ಯ ತಪಾಸಣೆ ಮುಖ್ಯವೆಂದು ಸಲಹೆ ನೀಡಿದರು.

ಆಸ್ಪತ್ರೆಯ ಹೃದ್ರೋಗ ತಜ್ಞ ವೈದ್ಯ

> **ಬಡವರು, ಸಾಮಾನ್ಯ ಜನರಿಗೆ ಉಚಿತ ಹಾಗು ರಿಯಾಯಿತಿ ದರದಲ್ಲಿ ಚಿಕಿತ್ಸೆ ನೀಡಲು ಇರುವ ಸರ್ಕಾರದ ಯೋಜನೆಗಳನ್ನು ಅಳವಡಿಸಿಕೊಂಡು ವೈದ್ಯಕೀಯ ಸೌಲಭ್ಯ ನೀಡುವ ಮೂಲಕ ನೆರವಾಗಿ.**
> **-ಶ್ರೇಯಸ್ ಪಟೇಲ್, ಸಂಸದ**

ಡಾ||ಮಂಜುನಾಥ್ ಅವರು ಮಾತನಾಡಿ, ಎಲ್ಲಾ ವಯೋಮಾನದವರಲ್ಲೂ ಇಂದು ಹೃದಯ ಸಂಬಂಧಿ ತೊಂದರೆ ಸಾಮಾನ್ಯವಾಗಿದೆ. ಹೃದಯದ ಆರೋಗ್ಯ ಕಾಪಾಡುವುದು ಅತ್ಯವಶ್ಯಕ. ನಿರ್ಲಕ್ಷ್ಯ ವಹಿಸಬಾರದೆಂದು ಕಿವಿ ಮಾತು ಹೇಳಿದರು.

ಪತ್ರಕರ್ತರ ಸಂಘದ ರಾಜ್ಯ ಉಪಾಧ್ಯಕ್ಷ ಹೆಚ್.ಬಿ.ಮದನಗೌಡ, ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಜೆ.ಆರ್.ಕೆಂಚೇಗೌಡ, ಮಾಜಿ ಅಧ್ಯಕ್ಷರಾದ ರವಿ ನಾಕಲಗೂಡು, ಬಿ.ಆರ್.ಉದಯ ಕುಮಾರ್, ಹೆಮ್ಮಿಗೆ ಮೋಹನ್, ವೈದ್ಯರಾದ ಡಾ|| ಮನೋಜ್ ಕುಮಾರ್, ನಿರ್ದೇಶಕ ಶಾರುಕ್ ಖಾನ್ ಅಬ್ದುಲ್ಲಾ ಇದ್ದರು.

ಜಪ್ತಿ ಮಾಡಿದ, ಅವಧಿ ಮುಗಿದ ಮದ್ಯ ನಾಶ

• ಪ್ರಜೋದಯ ವರದಿ

ಹಾಸನ: ಅಬಕಾರಿ ಇಲಾಖೆ ಅಧಿಕಾರಿಗಳು ಜಿಲ್ಲೆಯ ವಿವಿಧ ಪ್ರಕರಣಗಳಲ್ಲಿ ಜಪ್ತಿ ಮಾಡಲಾಗಿದ್ದ ಹಾಗು ಅವಧಿ ಮುಕ್ತಾಯಗೊಂಡಿದ್ದ 252 ಲೀಟರ್‌ಗೂ ಅಧಿಕ ಮದ್ಯ ಮತ್ತು ಬಿಯರ್ ಅನ್ನು ನಿಯಮಾನುಸಾರ ಗುರುವಾರ ನಾಶಪಡಿಸಲಾಯಿತು.

ನಗರದ ಎಸ್.ಬಿ.ಎಂ. ಕಾಲೋನಿಯ ಬಿ.ಕಾಟೀಹಳ್ಳಿ ಅರಸೀಕೆರೆ ರಸ್ತೆಯಲ್ಲಿರುವ ಅಬಕಾರಿ ಭವನದ ಆವರಣದಲ್ಲಿ ಅಬಕಾರಿ ಉಪ ಅಧೀಕ್ಷಕರ ಸಮ್ಮುಖದಲ್ಲಿ ಮದ್ಯ ವಿಲೇವಾರಿ ಮಾಡಿ ನಾಶಪಡಿಸುವ ಪ್ರಕ್ರಿಯೆ ನಡೆಯಿತು.

ಅಬಕಾರಿ ಉಪ ಆಯುಕ್ತರ ಆದೇಶದಂತೆ ಕೈಗೊಂಡ ಕಾರ್ಯಾಚರಣೆಯಲ್ಲಿ ಎಂ.ಎಸ್.ಐ.ಎಲ್. ಸನ್ನದುಗಳಲ್ಲಿ ಅವಧಿ ಮೀರಿದ್ದ 89.485 ಲೀಟರ್ ಭಾರತೀಯ ತಯಾರಿಕಾ ಮದ್ಯ (ಐಎಂಎಲ್) ಹಾಗು 162.965 ಲೀಟರ್ ಬಿಯರ್ ನಾಶಪಡಿಸಲಾಯಿತು. ಜೊತೆಗೆ ಹಾಸನ ಒಂದನೇ ವಲಯ ವ್ಯಾಪ್ತಿಯಲ್ಲಿ ದಾಖಲಾಗಿದ್ದ ಪ್ರಕರಣಗಳಲ್ಲಿ ವಶಪಡಿಸಿಕೊಳ್ಳಲಾಗಿದ್ದ 16.580 ಲೀಟರ್ ಮದ್ಯ ಮತ್ತು 0.500 ಲೀಟರ್ ಬಿಯರ್ ಅನ್ನು ಸಹ ನಾಶ ಮಾಡಲಾಯಿತು.

ಕಳೆದ ಒಂದು ವರ್ಷದಲ್ಲಿ ವಿವಿಧ ಅಬಕಾರಿ ಪ್ರಕರಣಗಳಲ್ಲಿ ಜಪ್ತಿ ಮಾಡಲಾಗಿದ್ದ ಮದ್ಯ ವನ್ನು ವಲಯ ಕಚೇರಿಯ ಗೋಡೌನ್‌ನಿಂದ ಹೊರತೆಗೆದು ಪಂಚರ ಸಮ್ಮುಖದಲ್ಲಿ ಪರಿಶೀಲಿಸ ಲಾಯಿತು. ಮದ್ಯದ ಪ್ರಮಾಣ, ದಾಖಲೆಗಳು ಹಾಗೂ ರಾಸಾಯನಿಕ ಪರೀಕ್ಷೆಗೆ ಕಳುಹಿಸಲಾಗಿದ್ದ ಮಾದರಿಗಳ ವಿವರಗಳನ್ನು ಪರಿಶೀಲಿಸಿದ ಬಳಿಕ ಉಳಿದ ಮದ್ಯವನ್ನು ನಿಯಮಾನುಸಾರ ನಾಶ ಮಾಡಲಾಯಿತು.

ಹಾಸನ, ಶಾಂತಿಗ್ರಾಮ ಹಾಗು ದುದ್ದ ಪೊಲೀಸ್ ಠಾಣೆಗಳ ವ್ಯಾಪ್ತಿಯಲ್ಲಿ ದಾಖಲಾಗಿದ್ದ ಹಲವು ಪ್ರಕರಣಗಳಿಗೆ ಸಂಬಂಧಿಸಿದ ಮದ್ಯವೂ ವಿಲೇವಾರಿ ಪ್ರಕ್ರಿಯೆಯಲ್ಲಿ ಒಳಗೊಂಡಿತ್ತು. ಅಕ್ರಮ ಮದ್ಯ ಮಾರಾಟ, ಸಂಗ್ರಹಣೆ ಹಾಗೂ ಅವಧಿ ಮೀರಿದ ಮದ್ಯದ ವಹಿವಾಟು ತಡೆ ಗಟ್ಟುವ ನಿಟ್ಟಿನಲ್ಲಿ ಇಲಾಖೆ ನಿರಂತರವಾಗಿ ಕಾರ್ಯಾಚರಣೆ ನಡೆಸುತ್ತಿದೆ. ಸಾರ್ವಜನಿಕರ ಆರೋಗ್ಯ ರಕ್ಷಣೆ ಹಾಗು ಪರಿಸರ ಮಾಲಿನ್ಯ ತಡೆಗಟ್ಟುವ ಉದ್ದೇಶದಿಂದ ಈ ಕ್ರಮ ಕೈಗೊಳ್ಳ ಲಾಗಿದೆಂದು ಅಬಕಾರಿ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ.

ನಾಲ್ವಡಿ ಜಯಂತಿ ಸರ್ಕಾರವೇ ಆಚರಿಸುವಂತಾಗಲಿ

ಶಾಸಕ ಸಿ.ಎನ್.ಬಾಲಕೃಷ್ಣ ಒತ್ತಾಯ

• ಪ್ರಜೋದಯ ವರದಿ

ಚನ್ನರಾಯಪಟ್ಟಣ: ಮೈಸೂರು ಸಂಸ್ಥಾನದ ಅಭಿವೃದ್ಧಿ ಹಾಗೂ ಸಾಮಾಜಿಕ ನ್ಯಾಯದ ಹರಿಕಾರರಾದ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಜಯಂತಿಯನ್ನು ಸರ್ಕಾರದಿಂದಲೇ ಆಚರಿಸುವಂತಾಗಬೇಕೆಂದು ಶಾಸಕ ಸಿ.ಎನ್.ಬಾಲಕೃಷ್ಣ ಅವರು ಹೇಳಿದರು.

ಪಟ್ಟಣದ ಬಾಲಕಿಯರ ಸರ್ಕಾರಿ ಪ್ರೌಢಶಾಲೆಯಲ್ಲಿ ಕನ್ನಡ ಸಾಹಿತ್ಯ ಪರಿಷತ್ ತಾಲ್ಲೂಕು ಘಟಕದ ವತಿಯಿಂದ ಗುರುವಾರ ಆಯೋಜಿಸಿದ್ದ ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ 142ನೇ ಜಯಂತೋತ್ಸವದಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿ, ನಾಲ್ವಡಿ ಕೃಷ್ಣರಾಜ ಒಡೆಯರು ಕೇವಲ ಮೈಸೂರಿಗೆ ಸೀಮಿತವಾಗಿರಲಿಲ್ಲ, ಇಡೀ ಕರ್ನಾಟಕದ ಅಭಿವೃದ್ಧಿಗೆ ಅಡಿಪಾಯ ಹಾಕಿದ ದೂರದೃಷ್ಟಿಯ ರಾಜರಾಗಿದ್ದು, ಅವರ ಹೆಸರು ಮುಂದಿನ ಪೀಳಿಗೆಯಲ್ಲೂ ಚಿರಸ್ಥಾಯಿಯಾಗಿ ಉಳಿಯುವಂತೆ ಸರ್ಕಾರ ಕಾರ್ಯಕ್ರಮ ರೂಪಿಸಬೇಕು. ಸ್ವಾತಂತ್ರ್ಯ ಪೂರ್ವದಲ್ಲಿಯೇ ಸಾಮಾಜಿಕ ನ್ಯಾಯದ ಅನುಷ್ಠಾನಕ್ಕಾಗಿ ರಾಜಾಡಳಿತದಲ್ಲಿಯೇ ಪ್ರಜಾಡಳಿತ ಜಾರಿ ಮಾಡಿ ಹಿಂದುಳಿದವರಿಗೆ ಮೀಸಲಾತಿ ನೀಡುವ ಮೂಲಕ ಸಾಮಾಜಿಕ ನ್ಯಾಯ ಜಾರಿಗೆ ತಂದು, ದೇವದಾಸಿಯತಂಹ ಸಾಮಾಜಿಕ ಅನಿಷ್ಟ ಪದ್ಧತಿಗಳನ್ನು ರದ್ದುಗೊಳಿಸಿ, ಮೈಸೂರು ವಿಶ್ವವಿದ್ಯಾಲಯ ಸ್ಥಾಪನೆ ಮಾಡಿ ಶಿಕ್ಷಣಕ್ಕೆ ಆದ್ಯತೆ ನೀಡಿದ್ದರೆಂದು ತಿಳಿಸಿದರು.

ವಿಶ್ವಾ ಖಂಡದಲ್ಲಿಯೇ ಮೊದಲಿಗೆ ಜಲ ವಿದ್ಯುತ್ ಉತ್ಪಾದನೆ ಮಾಡಿ ನಾಡನ್ನು ಬೆಳಗಿಸಿ ಆಧುನಿಕ ಕೈಗಾರಿಕೆಗಳನ್ನು ಸ್ಥಾಪಿಸಿ ಉದ್ಯೋಗ ಸೃಷ್ಟಿಸಿ ಮೈಸೂರು ಸಂಸ್ಥಾನವನ್ನು ಮಾದರಿ ಸಂಸ್ಥಾನವಾಗಿ ರೂಪಿಸಿದ್ದಾರೆ, ಇತಂಹ ಮಹನೀಯರ ಜಯಂತಿ ಆಚರಣೆಗೆ ಸರ್ಕಾರದ ಉದಾಸೀನ ಧೋರಣೆ ಸರಿಯಲ್ಲ, ವಿಶ್ವಕ್ಕೆ ಮಾದರಿ ಆಡಳಿತ ನೀಡಿ, ಆಧುನಿಕ ಮೈಸೂರಿನ ನಿರ್ಮಾತೃ ಎಂದೇ ಕರೆಯಲ್ಪಡುವ ಅವರ ಜಯಂತಿಯನ್ನು ರಾಜ್ಯದಾದ್ಯಂತ ಸರ್ಕಾರದ ವತಿಯಿಂದ ಅದ್ದೂರಿಯಾಗಿ ಆಚರಿಸಬೇಕು. ಜಯಂತಿ ಆಚರಣೆಗೆ ಸಂಬಂಧಿಸಿದಂತೆ ಸದನ ದಲ್ಲಿ ಅಧಿವೇಶನದ ವೇಳೆ ಧ್ವನಿ ಎತ್ತಿ ಸರ್ಕಾರದ ಗಮನ ಸೆಳೆಯಲಾಗುವುದೆಂದು ತಿಳಿಸಿದರು.

ನಾಲ್ವಡಿಯವರ ಕೊಡುಗೆಗಳ ಬಗ್ಗೆ ವಿಶೇಷ ಉಪನ್ಯಾಸ ನೀಡಿದ ನವೋದಯ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಮಂಜಪ್ಪ, ನಾಲ್ವಡಿ ಕೃಷ್ಣರಾಜ ಒಡೆಯರ 39 ವರ್ಷಗಳ ಆಳ್ವಿಕೆ ಮೈಸೂರು ರಾಜ್ಯವನ್ನು ಪ್ರಗತಿಪರ, ಸ್ವಾವಲಂಬಿ ಮಾಡಿತು. ಶಿಕ್ಷಣಕ್ಕೆ ಆದ್ಯತೆ ನೀಡಿದ್ದು, ಪ್ರಾಥಮಿಕ ಶಿಕ್ಷಣವನ್ನು ಕಡ್ಡಾಯಗೊಳಿಸಿದರು. ಆಧುನಿಕ ಮೈಸೂರಿನ ನೈಜ ನಿರ್ಮಾತೃ, ನಾಲ್ವಡಿಯವರ ದೂರದೃಷ್ಟಿ ಮೈಸೂರನ್ನು ನಾವೀನ್ಯತೆಯ ತಾಣವನ್ನಾಗಿ ರೂಪಿಸಿತು. 1902ರಲ್ಲಿ ಶಿವನ ಸಮುದ್ರ ಜಲಪಾತ ಯೋಜನೆಯ ಮೂಲಕ, ಮೈಸೂರು ಜಲ ವಿದ್ಯುತ್ ಉತ್ಪಾದಿಸುವ ಭಾರತದ ಮೊದಲ ರಾಜ್ಯ ಎಂಬ ಹೆಗ್ಗಳಿಕೆಗೆ ಪಾತ್ರವಾಯಿತು. ಆ ಮೂಲಕ 1905ರಲ್ಲಿ ಬೆಂಗಳೂರು ವಿದ್ಯುತ್ ಬೀದಿ ದೀಪಗಳನ್ನು ಹೊಂದಿರುವ ಏಷ್ಯಾದ ಮೊದಲ ನಗರ ಎಂಬ ಕೀರ್ತಿ ಪಡೆಯಿತು ಎಂದು ಶ್ಲಾಘಿಸಿದರು.

1911ರಿಂದ 1932ರ ನಡುವೆ ನಿರ್ಮಾಣಗೊಂಡ ಕೃಷ್ಣರಾಜ ಸಾಗರ ಅಣೆಕಟ್ಟು ಆ ಸಮಯ ದಲ್ಲಿ ಏಷ್ಯಾದ ಅತಿದೊಡ್ಡ ಅಣೆಕಟ್ಟಾಗಿದ್ದು, ಇಂದಿಗೂ ಅಪಾರ ಪ್ರಮಾಣದ ಭೂಮಿಗೆ ನೀರಾವರಿ ಒದಗಿಸಿ, ಹಾಸನ, ಮೈಸೂರು ಮತ್ತು ಮಂಡ್ಯ ಜಿಲ್ಲೆಗಳ ರೈತರ ಜೀವನಾಡಿಯಾಗಿದೆ. ಅವರು ಪ್ರಮುಖ ಉದ್ಯಮಗಳಿಗೂ ಚಾಲನೆ ನೀಡಿದ್ದು, ಮೈಸೂರು ಪೇಪರ್ ಮಿಲ್ಸ್, ಭದ್ರಾವತಿ ಕಬ್ಬಿಣ ಮತ್ತು ಉಕ್ಕಿನ ಕಾರ್ಖಾನೆ, ಮೈಸೂರು ಸ್ಯಾಂಡಲ್ ಸೋಪ್ ಕಾರ್ಖಾನೆ ಸ್ಥಾಪಿಸಿ ಕೈಗಾರಿಕಾ ಕ